# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 03 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 12–07–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 03 | Title- Code: KARKAN 28269 | Chitradurga | Date: 12-07-2024 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸಿಎಂ ಸ್ಥಾನಕ್ಕೆ ಸಿದ್ದು ರಾಜೀನಾಮೆ ನೀಡಲಿ: ಸಂಸದ ಗೋವಿಂದ ಕಾರಜೋಳ 2

ಜಿಲ್ಲೆಯಲ್ಲಿ ಡೆಂಗೀ ನಿಯಂತ್ರಣ, ನಿರ್ಮೂಲನೆಗೆ ಕ್ರಮವಹಿಸಿ: ಎಡಿಸಿ 3

ಚಿತ್ರದುರ್ಗ– ಪಾವಗಡ ರಸ್ತೆ: ಹೆದ್ದಾರಿಯಾಗಿ ಮೇಲ್ದರ್ಜೆಗೆ ಏರಿಸಲು ಪ್ರಸ್ತಾವನೆ; ಸಂಸದ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಮಾಧ್ಯಮ ಅಕಾಡೆಮಿ ಸದಸ್ಯರಾಗಿ ಆಯ್ಕೆಯಾದ ಅಹೋಬಳಪತಿ ಅಭಿನಂದನೆ: ಡಾ.ನಟರಾಜ್ ಹೇಳಿಕೆ

# 3 ದಶಕದ ಹೋರಾಟಕ್ಕೆ ಸಂದ ಗೌರವ





» ಚಿತ್ರದುರ್ಗ

ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯರಾಗಿ ಆಯ್ಕೆಯಾಗಿರುವ ಹಿರಿಯ ಪತ್ರಕರ್ತ ಅಹೋಬಳಪತಿ ಅವರಿಗೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಪತ್ರಿಕಾ ಭವನದಲ್ಲಿ ಗುರುವಾರ ಅಭಿನಂದಿಸಲಾಯಿತು.

ನಿವೃತ್ತ ಪ್ರಾಧ್ಯಾಪಕ ಡಾ.ನಟರಾಜ್ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿ, ಕರ್ನಾಟಕ ರಾಜ್ಯ ಸರ್ಕಾರ ಗುರುತಿಸಿ ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯನನ್ನಾಗಿ ನೇಮಕ ಮಾಡುವಷ್ಟರ ಮಟ್ಟಿಗೆ ಅಹೋಬಲಪತಿ ಬೆಳೆದಿರುವುದು ಎಲ್ಲರಿಗೂ ಅತ್ಯಂತ ಖುಷಿ ಕೊಟ್ಟಿದೆ. ಸ್ಥಳೀಯ ದಿನಪತ್ರಿಕೆಯಿಂದ ವೃತ್ತಿ ಜೀವನ ಆರಂಭಿಸಿದ ಅವರು ರಾಜ್ಯಮಟ್ಟದ ಪತ್ರಿಕೆ ವರದಿಗಾರನಾಗಿರುವುದು ಕಡಿಮೆ ಸಾಧನೆಯಲ್ಲ. ಅವರ ಬರವಣಿಗೆಯಲ್ಲಿ ಹೊಸತನವಿದೆ. ಮೂರು ದಶಕಗಳ ಹೋರಾಟವಿದೆ. ಸಾಧಕರನ್ನು ಒಂದಲ್ಲ ಒಂದು ದಿನ ಗುರುತಿಸುತ್ತಾರೆನ್ನುವುದಕ್ಕೆ ಮಾಧ್ಯಮ ಅಕಾಡೆಮಿ ಸದಸ್ಯರಾಗಿ ನೇಮಕಗೊಂಡಿರುವುದೇ ಸಾಕ್ಷಿ ಎಂದು ಹೇಳಿದರು. ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಹಿಂದುಳಿದಿರುವ ಚಿತ್ರದುರ್ಗ ಜಿಲ್ಲೆಯಲ್ಲಿ ಕೆಲವು ಬದಲಾವಣೆಗೆ ಒತ್ತು ಕೊಡಬೇಕು. ಉನ್ನತ ಶಿಕ್ಷಣ ಸಂಸ್ಥೆಗಳನ್ನು ರಾಜ್ಯ ಸರ್ಕಾರ ಬೇರೆ ಜಿಲ್ಲೆಗಳಿಗೆ ಕೊಟ್ಟಿರುವುದರಿಂದ ಚಿತ್ರದುರ್ಗ ಶೈಕ್ಷಣಿಕವಾಗಿ ಹಿಂದುಳಿಯಲು ಕಾರಣ. ಸರ್ಕಾರ ಗಮನ ಹರಿಸಬೇಕೆಂದು ಮನವಿ ಮಾಡಿದರು.

ಹಿರಿಯ ಪತ್ರಕರ್ತ ಚಿಕ್ಕಪ್ಪನಹಳ್ಳಿ ಷಣ್ಮುಖ ಮಾತನಾಡಿ, ಅಹೋಬಳಪತಿಯವರು ಹೋರಾಟದ ಹಾದಿಯಿಂದ ಬಂದವರು. ಸ್ಥಳೀಯ ಪತ್ರಿಕೆಯಿಂದ ಬರವಣಿಗೆ ಆರಂಭಿಸಿ ರಾಜ್ಯ ಮಟ್ಟದ ಪತ್ರಿಕೆ ವರದಿಗಾರನಾಗಿರುವುದು ಅವರ ಬರವಣಿಗೆಗೆ ಸಿಕ್ಕ ಪ್ರತಿಫಲ. ನನಗೆ ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಸಿಕ್ಕಾಗ ನನ್ನ ವಿರುದ್ಧ ಹಲವರು ಷಡ್ಯಂತ್ರ ನಡೆಸಿ ನಕ್ಸಲ್ ಪಟ್ಟ ಕಟ್ಟಿದರು. ಅದ್ಯಾವುದಕ್ಕೂ ಜಗ್ಗಲಿಲ್ಲ. ಚಿತ್ರದುರ್ಗದ ಸಂಸದರೊಬ್ಬರ ಬಗ್ಗೆ ಪತ್ರಿಕೆಯಲ್ಲಿ ವರದಿ ಮಾಡಿದಾಗ ಸಾಕಷ್ಟು ಬೆದರಿಕೆಗಳನ್ನು ಎದುರಿಸಬೇಕಾಯಿತು. ಅದೇ ರೀತಿ ಇವರು ಕೂಡ ಅನೇಕ ಸವಾಲುಗಳನ್ನು ಮೆಟ್ಟಿ ನಿಂತಿದ್ದಾರೆಂದು ಗುಣಗಾನ ಮಾಡಿದರು. ಹಿರಿಯ ಪತ್ರಕರ್ತ ಶ.ಮಂಜುನಾಥ್ ಮಾತನಾಡಿ, ನನ್ನ ಸಂಪಾದಕತ್ವದ ಸುದ್ದಿಗಿಡುಗ ಪತ್ರಿಕೆ ವರದಿಗಾರರಾಗಿ ಪತ್ರಿಕೋದ್ಯಮ ಪ್ರವೇಶಿಸಿದ ಅಹೋಬಲಪತಿ ಚಲನಚಿತ್ರ ವೀಕ್ಷಿಸಿ ಬಂದ ಮೇಲೆ ಚಿತ್ರದ ಕುರಿತು ವಿಶ್ಲೇಷಣೆ ಬರೆಯಲು ಆರಂಭಿಸಿದಾಗ ಚಿತ್ರಮಂದಿರದ ಮಾಲೀಕರು ವಿಶ್ಲೇಷಣೆ ಬರೆಯುವುದನ್ನು ನಿಲ್ಲಿಸುವಂತೆ ಒತ್ತಡ ಹೇರಿದರು. ನಗರಸಭೆ ಅಧ್ಯಕ್ಷರಾಗಿದ್ದವರೊಬ್ಬರು ಪೈಪ್‌ಗಳನ್ನು ಮಾರಾಟ ಮಾಡಿಕೊಂಡಾಗ ಪೈಪ್ ಕಳ್ಳ ಎಂದು ಬರೆದಾಗಲು ನನ್ನ ಮೇಲೆ ಹಲ್ಲೆಗೆ ಯತ್ನಿಸಿದರು. ಎಂತಹ ಕಠಿಣ ಸಂದರ್ಭ ಎದುರಾದರೂ ನನ್ನನ್ನು ಅವರು ಬಿಟ್ಟುಕೊಡಲಿಲ್ಲ. ಏಕೆಂದರೆ ಅವರಲ್ಲಿ ಅಂತಹ ಮೊನಚು ಬರವಣಿಗೆಯಿದೆ ಎಂದು ಶ್ಲಾಘಿಸಿದರು. ಇವರು ಎಂದಿಗೂ ಪ್ರಶಸ್ತಿಗೆ ಲಾಭಿ ಮಾಡಿದವರಲ್ಲ. ಅವರ ಪ್ರಾಮಾಣಿಕತೆಯನ್ನು ಗುರುತಿಸಿ ರಾಜ್ಯ ಸರ್ಕಾರ ಮಾಧ್ಯಮ ಅಕಾಡೆಮಿ ಸದಸ್ಯರನ್ನಾಗಿ ನೇಮಕ ಮಾಡಿರುವುದು ಮಾಧ್ಯಮ ಮಿತ್ರರಿಗೆ ಸಂದ ಗೌರವ ಎಂದು ಶ್ಲಾಘಿಸಿದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಮಾಧ್ಯಮ ಅಕಾಡೆಮಿ ಸದಸ್ಯ ಅಹೋಬಳಪತಿ, ಇದನ್ನು ನಾನು ನಿರೀಕ್ಷೆ ಮಾಡಿರಲಿಲ್ಲ. ರಾಜ್ಯ ಸರ್ಕಾರ ನನ್ನನ್ನು ಗುರುತಿಸಿ ಮಾಧ್ಯಮ ಅಕಾಡೆಮಿ ಸದಸ್ಯನಾಗಿ ಆಯ್ಕೆ ಮಾಡಿರುವುದು ಖುಷಿ ತಂದಿದೆ. ಈ ಅವಕಾಶವನ್ನು ಬಳಸಿಕೊಂಡು ಚಿತ್ರದುರ್ಗ ಜಿಲ್ಲೆಯಲ್ಲಿ ಅನೇಕ ವಿಚಾರ ಸಂಕಿರಣ, ಕಾರ್ಯಾಗಾರಗಳನ್ನು ನಡೆಸುತ್ತೇನೆಂದು ಹೇಳಿದರು. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಿನೇಶ್‌ಗೌಡಗೆರೆ ಅಧ್ಯಕ್ಷತೆ ವಹಿಸಿ ಮಾತನಾಡಿ, ಹೋರಾಟದ ಮನೋಭಾವನೆಯುಳ್ಳ ಅಹೋಬಳಪತಿಯನ್ನು ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯರಾಗಿ ನೇಮಕಗೊಳಿಸಿರುವುದು ಸಂತಸದ ಸಂಗತಿ. ಇನ್ನು ಹೆಚ್ಚಿನ ಅವಕಾಶ ಸಿಗಲಿ ಎಂದು ಹಾರೈಸಿದರು.

ಮಾಧ್ಯಮ ಮಿತ್ರರು ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ನರ್ಸಿಂಗ್ ವಿದ್ಯಾರ್ಥಿಗಳಿಗೆ ಜರ್ಮನಿಯಲ್ಲಿ ಉದ್ಯೋಗಾವಕಾಶ

» ಚಿತ್ರದುರ್ಗ

ಜರ್ಮನ್ ಸರ್ಕಾರದಿಂದ ಮಾನ್ಯತೆ ಪಡೆದಿರುವ ಮೆ.ಟ್ಯಾಲೆಂಟ್ ಆರೆಂಜ್ ಸಂಸ್ಥೆಯು, ಭಾರತ ದೇಶದಿಂದ ನರ್ಸ್ ಆಗಿ ಕೆಲಸ ನಿರ್ವಹಿಸಲು ಬಿ.ಎಸ್ಸಿ ಹಾಗೂ ಜಿ.ಎನ್.ಎಂ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಗೆ ಜರ್ಮನಿಯಲ್ಲಿ ಉದ್ಯೋಗ ಕಲ್ಪಿಸಲು ಮುಂದೆ ಬಂದಿದೆ. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ ನರ್ಸಿಂಗ್ ಅಭ್ಯರ್ಥಿಗಳನ್ನು ಆಯ್ಕೆಗೊಳಿಸಿ, ಕೇರಳ ರಾಜ್ಯದ ತಿರುವನಂತಪುರದ ತರಬೇತಿ ಕೇಂದ್ರದಲ್ಲಿ 8 ತಿಂಗಳ ಕಾಲ ಜರ್ಮನ್ ಭಾಷೆಯ ಬಗ್ಗೆ ತರಬೇತಿ ನೀಡಿ, ಸಂಸ್ಥೆಯ ವತಿಯಿಂದ ಊಟ ಹಾಗೂ ವಸತಿ ಸೌಲಭ್ಯ ನೀಡಿ ಜರ್ಮನಿಗೆ ಉಚಿತ ಪ್ರಯಾಣದ ವ್ಯವಸ್ಥೆಯನ್ನು ಒದಗಿಸಲಾಗುವುದು. ಆಸಕ್ತ ಅಭ್ಯರ್ಥಿಗಳು ಬಿ.ಎಸ್ಸಿ (ನರ್ಸಿಂಗ್) ಬಿಎಸ್ಸಿ, ಜಿ.ಎನ್.ಎಂ ವಿದ್ಯಾರ್ಹತೆ ಹೊಂದಿರಬೇಕು, 38 ವರ್ಷ ವಯೋಮಿತಿ ಒಳಗಿರುವ ಮಹಿಳಾ ಅಭ್ಯರ್ಥಿ ಹಾಗೂ ಪುರುಷ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಹೊಸಬರು ಅಥವಾ ಅನುಭವವುಳ್ಳರಿಗೂ ಅವಕಾಶವಿದೆ. ಹೆಣ್ಣುಮಕ್ಕಳು ಚಿಕ್ಕ ಮಕ್ಕಳನ್ನು ಹೊಂದಿದ್ದಲ್ಲಿ ತಮ್ಮೊಂದಿಗೆ ಕರೆದೊಯ್ಯಲು ಅವಕಾಶವಿರುವುದಿಲ್ಲ. ಭಾರತೀಯ ನರ್ಸಿಂಗ್ ಲೈಸೆನ್ಸ್ ಹೊಂದಿರುವುದು ಕಡ್ಡಾಯವಾಗಿದೆ. ಜರ್ಮನಿಯಲ್ಲಿ ಕೆಲಸ ನಿರ್ವಹಿಸಲು ಉತ್ಸುಕರಾದ ಈಗಾಗಲೇ ನರ್ಸಿಂಗ್ ಪೂರ್ಣಗೊಳಿಸಿದ ಉದ್ಯೋಗಾಕಾಂಕ್ಷಿಗಳು ಚಿತ್ರದುರ್ಗ ನಗರದ ಜೆ.ಸಿ.ಆರ್ ಬಡಾವಣೆಯ ಕಾರ್ಮಿಕ ಅಧಿಕಾರಿಗಳ ಕಚೇರಿಯಲ್ಲಿ ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಕಚೇರಿಯ ದೂರವಾಣಿ ಸಂಖ್ಯೆ 08194–231394ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಡೆಂಗ್ಯೂ: ನೋಡಲ್ ಅಧಿಕಾರಿಗಳ ನೇಮಕ

» ಚಿತ್ರದುರ್ಗ

ಜಿಲ್ಲೆಯಲ್ಲಿ ಡೆಂಗ್ಯೂ ಜ್ವರ ಹರಡದಂತೆ ಹಾಗೂ ಸೊಳ್ಳೆಗಳು ಹೆಚ್ಚಾಗದಂತೆ ಅಗತ್ಯ ಕ್ರಮಕೈಗೊಳ್ಳಲು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿಗಳನ್ನು ನೇಮಿಸಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಆದೇಶ ಹೊರಡಿಸಿದ್ದಾರೆ. ಚಿತ್ರದುರ್ಗ ತಾಲ್ಲೂಕಿಗೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್, ಚಳ್ಳಕೆರೆ ತಾಲ್ಲೂಕಿಗೆ ತಾಂತ್ರಿಕ ಸಹಾಯಕರು ಮತ್ತು ಪದನಿಮಿತ್ತ ಭೂ ದಾಖಲೆಗಳ ಉಪನಿರ್ದೇಶಕ ರಾಮಾಂಜನೇಯ, ಹಿರಿಯೂರು ತಾಲ್ಲೂಕಿಗೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ತಿಮ್ಮಪ್ಪ, ಹೊಳಲ್ಕೆರೆ ತಾಲ್ಲೂಕಿಗೆ ಗ್ರಾ.ಕು.ನೀ ಮತ್ತು ನೈ ವಿಭಾಗ ಕಾರ್ಯಪಾಲಕ ಇಂಜಿನಿಯರ್ ಬಸವನಗೌಡ, ಹೊಸದುರ್ಗ ತಾಲ್ಲೂಕಿಗೆ ಪಂ. ರಾಜ್ ಇಂಜಿನಿಯರ್ ವಿಭಾಗ ಕಾರ್ಯಪಾಲಕ ಅಭಿಯಂತರ ಹನುಮಂತಪ್ಪ ಹಾಗೂ ಮೊಳಕಾಲ್ಮೂರು ತಾಲ್ಲೂಕಿಗೆ ರೇಷ್ಮೆ ಇಲಾಖೆ ಉಪನಿರ್ದೇಶಕ ಎಂ.ಬಿ.ಬೀರಲದಿನ್ನಿ ಅವರನ್ನು ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿಗಳಾಗಿ ನೇಮಿಸಲಾಗಿದೆ. ಇದರ ಜೊತೆಗೆ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್ ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿಗಳ ಕಾರ್ಯ ವೈಖರಿ ಪರಿಶೀಲನೆ ಹಾಗೂ ವರದಿಗಳನ್ನು ಕ್ರೂಢಿಕರಣ ಮಾಡಿ ಪರಿಶೀಲಿಸಿ ಜಿಲ್ಲಾಧಿಕಾರಿಗಳಿಗೆ ವರದಿ ಮಾಡಲು ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಯಾಗಿ ನೇಮಿಸಲಾಗಿದೆ.

ತಾಲ್ಲೂಕು ನೋಡಲ್ ಅಧಿಕಾರಿಗಳು ಕಾಲಕಾಲಕ್ಕೆ ಕ್ಷೇತ್ರ ವ್ಯಾಪ್ತಿಯ ಗ್ರಾಮಗಳಿಗೆ ಭೇಟಿ ನೀಡಿ ಸ್ವಚ್ಚತೆ ಹಾಗೂ ಡೆಂಗ್ಯೂ ಜ್ವರದ ನಿಯಂತ್ರಣ ಕಾರ್ಯಕ್ರಮಗಳ ಬಗ್ಗೆ ಪರಿಶೀಲಿಸಿ ಕೈಗೊಂಡ ಕ್ರಮಗಳ ಕುರಿತು ಕೂಲಂಕಷವಾಗಿ ಪರಿಶೀಲಿಸಿ ವರದಿಯನ್ನು ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳಿಗೆ ಸಲ್ಲಿಸಿ ಅದರ ಪ್ರತಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸಲು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಸೂಚಿಸಿದ್ದಾರೆ.

### ಚಳ್ಳಕೆರೆ ನಗರಕ್ಕೆ ಕನ್ನಡ ಜ್ಯೋತಿರಥಯಾತ್ರೆ ಇಂದು ಆಗಮನ

# ಇಂದು ನಾಯಕನಹಟ್ಟಿ ಗಡಿಯಲ್ಲಿ ಭವ್ಯ ಸ್ವಾಗತ

» ಚಳ್ಳಕೆರೆ

ರಾಜ್ಯದ ಸುಮಾರು ಆರು ಕೋಟಿ ಜನರ ಬದುಕಿಗೆ ಆಸರೆಯಾಗಿರುವ ಕನ್ನಡ ನಮ್ಮೆಲ್ಲರ ಹೆಗ್ಗಳಿಕೆಯ ಆಡಳಿತ ಭಾಷೆ. ಕನ್ನಡಿಗರಲ್ಲಿ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸುವ ಕಾರ್ಯವನ್ನು ಕರ್ನಾಟಕ ಸಂಭ್ರಮ–50ರ ಮೂಲಕ ಆಚರಣೆ ಮಾಡುತ್ತಿದ್ದು ಕನ್ನಡಿಗರ ಹೆಮ್ಮೆಯ ಕನ್ನಡ ಜ್ಯೋತಿ ರಥಯಾತ್ರೆ ಜುಲೈ–12ರ ಶುಕ್ರವಾರ ಬೆಳಗ್ಗೆ ಚಳ್ಳಕೆರೆ ನಗರ ಪ್ರವೇಶ ಮಾಡಲಿದೆ ಎಂದು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ ತಿಳಿಸಿದರು.

ಅವರು, ಪತ್ರಿಕೆಯೊಂದಿಗೆ ಶುಕ್ರವಾರ ನಡೆಯುವ ಕನ್ನಡ ಜ್ಯೋತಿರಥಯಾತ್ರೆಗೆ ಕಾರ್ಯಕ್ರಮದ ಬಗ್ಗೆ ಮಾತನಾಡಿ, ಶುಕ್ರವಾರ ಬೆಳಗ್ಗೆ 10ಕ್ಕೆ ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮನ ಸನ್ನಿಧಿಯಲ್ಲಿ ಕನ್ನಡ ಜ್ಯೋತಿರಥವನ್ನು ಕ್ಷೇತ್ರದ ಕನ್ನಡಿಗರ ಪರವಾಗಿ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಸ್ವಾಗತಿಸುವರು.



# ವೃದ್ದೆಯನ್ನು ಸುಮಾರು 1.50 ಲಕ್ಷ ಮೌಲ್ಯದ ಚಿನ್ನದ ಸರ ಕಿತ್ತು ಪರಾರಿ

» ಚಳ್ಳಕೆರೆ

ತಾಲ್ಲೂಕಿನ ಬಾಲೇನಹಳ್ಳಿ, ಚಿಕ್ಕಮಧುರೆಯ ಕುಂಟಹಳ್ಳದ ಸೇತುವೆ ಬಳಿ ರಸ್ತೆಬದಿ ನಡೆದುಕೊಂಡು ಹೋಗುತ್ತಿದ್ದ ರೈತ ಮಹಿಳೆಯ ಕುತ್ತಿಗೆಗೆ ಕೈಹಾಕಿ ಸುಮಾರು 1.50 ಲಕ್ಷ ಮೌಲ್ಯದ ಬಂಗಾರದ ಸರವನ್ನು ಬೈಕ್‌ನಲ್ಲಿ ಬಂದ ಅಪರಿಚಿತ ವ್ಯಕ್ತಿಯೊಬ್ಬ ಕಿತ್ತು ಪರಾರಿಯಾಗಿದ್ದಾನೆ.



ಬಾಲೇನಹಳ್ಳಿಯ ಬಸಮ್ಮ(70) ಎಂಬ ವೃದ್ದೆ ತಮ್ಮ ಬಾಬ್ತು ಜಮೀನಿಗೆ ಭೇಟಿ ನೀಡಿ ಬುಧವಾರ ಮಧ್ಯಾಹ್ನ 1.30ರ ಸಮಯದಲ್ಲಿ ವಾಪಾಸ್ ಬರುವ ಸಂದರ್ಭದಲ್ಲಿ ಕೆಂಪುಬಣ್ಣದ ಮೋಟಾರ್ ಬೈಕ್‌ನಲ್ಲಿ ಬಂದ ವ್ಯಕ್ತಿ ಕೊರಳಲ್ಲಿದ್ದ 40ಗ್ರಾಂ ತೂಕದ ಚಿನ್ನದ ಸರವನ್ನು ಕಿತ್ತು ಚಿಕ್ಕಮಧುರೆ ಕಡೆ ಪರಾರಿಯಾಗಿದ್ದಾನೆ. ಘಟನೆ ನಡೆದ ಸ್ಥಳಕ್ಕೆ ಪಿಎಸ್ಐ ಜೆ.ಶಿವರಾಜ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

**ಪ್ರಮುಖ ಸುದ್ದಿ**

### ಸಂಸದ ಗೋವಿಂದ ಎಂ ಕಾರಜೋಳ ಹೇಳಿಕೆ

# ಭರಮಸಾಗರ–ಚಿತ್ರದುರ್ಗ ರೈಲ್ವೇಗೆ ಶೀಘ್ರ ಭೂಮಿ ಪೂಜೆ

» ಚಿತ್ರದುರ್ಗ

ಭರಮಸಾಗರ–ಚಿತ್ರದುರ್ಗ ಮಧ್ಯದ 29 ಕಿ.ಮೀ ಉದ್ದದ ರೈಲ್ವೇ ಭೂಸ್ವಾಧೀನ ಪ್ರಕ್ರಿಯೆ ಶೇ.90 ರಷ್ಟು ಮುಕ್ತಾಯಗೊಂಡಿದ್ದು, ಭೂಮಿ ಹಸ್ತಾಂತರ ಮಾಡಲಾಗಿದೆ. ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆ. ಶೀಘ್ರವೇ ರಾಜ್ಯದವರೇ ಆದ ರೈಲ್ವೇ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಅವರಿಂದ ಕಾಮಗಾರಿಯ ಭೂಮಿ ಪೂಜೆ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ಸಂಸದ ಗೋವಿಂದ ಎಂ ಕಾರಜೋಳ ರೈಲ್ವೇ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ರೈಲ್ವೇ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ದಾವಣಗೆರೆ–ಚಿತ್ರದುರ್ಗ–ತುಮಕೂರು ನೇರ ರೈಲ್ವೇ ಯೋಜನೆ ಜಿಲ್ಲೆ ಅಗತ್ಯವಾಗಿದೆ. ಯೋಜನೆಗೆ ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯ ಒಟ್ಟು 1210 ಎಕರೆ ಭೂಮಿ ಅವಶ್ಯಕವಾಗಿದೆ. ಇದರಲ್ಲಿ 1053 ಎಕರೆ ಭೂಮಿ ಸ್ವಾಧೀನ ಪಡಿಸಿಕೊಂಡು ರೈಲ್ವೇ ಇಲಾಖೆ ನೀಡಲಾಗಿದೆ. ಬಾಕಿ ಇರುವ 145 ಎಕರೆ ಭೂ ಸ್ವಾಧೀನ ಪ್ರಕ್ರಿಯ ಅಂತಿಮ ಹಂತದಲ್ಲಿದೆ. ಯೋಜನೆ ವಿಳಂಭವಾಗದಂತೆ ರೈಲ್ವೇ ಕಾಮಗಾರಿಗೆ ಅಗತ್ಯ ಇರುವ ಭೂಮಿ ಸ್ವಾಧೀನ ಹಾಗೂ ರೈಲ್ವೇ ಇಲಾಖೆಗೆ ಭೂಮಿ ಹಸ್ತಾಂತರಿಸುವ ಪ್ರಕ್ರಿಯೆಯನ್ನು ತ್ವರಿತವಾಗಿ ಮಾಡುವಂತೆ ಸಂಸದ ಗೋವಿಂದ ಎಂ ಕಾರಜೋಳ ಭೂಸ್ವಾಧೀನಾಧಿಕಾರಿಗಳಿಗೆ ಸೂಚಿಸಿದರು.



ಈ ಹಿಂದೆ ಯಡಿಯೂರಪ್ಪನವರು ಮುಖ್ಯಮಂತ್ರಿಗಳು ಇದ್ದಾಗ ಆಲಮಟ್ಟಿ–ಕೊಪ್ಪಳ–ಚಿತ್ರದುರ್ಗ ರೈಲು ಮಾರ್ಗ ಯೋಜನೆಯ ಪ್ರಸ್ತಾವವನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಕೊಡಲಾಗಿತ್ತು. 50:50 ಮಾದರಿಯಲ್ಲಿ ರಾಜ್ಯ ಸರ್ಕಾರ ಅನುದಾನ ಬಿಡುಗಡೆ ಮಾಡುವುದರೊಂದಿಗೆ, ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ ಭೂಮಿ ಹಸ್ತಾಂತರ ಮಾಡುವುದಾಗಿ ಪ್ರಸ್ತಾವನೆಯಲ್ಲಿ ತಿಳಿಸಲಾಗಿತ್ತು. ಈ ಯೋಜನೆಗೆ ಮರುಜೀವ ನೀಡುವ ನಿಟ್ಟಿನಲ್ಲಿ ಚಿತ್ರದುರ್ಗ ಜಿಲ್ಲೆಯಿಂದ ಮತ್ತೊಮ್ಮೆ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು. ಚಿತ್ರದುರ್ಗ ಜಿಲ್ಲಾಧಿಕಾರಿಗಳು ಬಾಗಲಕೋಟೆ ಹಾಗೂ ಬಿಜಾಪುರ ಜಿಲ್ಲಾಧಿಕಾರಿಗಳೊಂದಿಗೆ ಮಾತನಾಡಿ, ಈ ಹಿಂದೆ ಸಲ್ಲಿಸಿದ್ದ ಯೋಜನೆ ಪ್ರಸ್ತಾವನೆ ಪ್ರತಿ ಪಡೆದುಕೊಳ್ಳುವಂತೆ ನಿರ್ದೇಶನ ನೀಡಿದ್ದೇನೆ ಎಂದು ಸಂಸದ ಗೋವಿಂದ ಎಂ ಕಾರಜೋಳ ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಭೂಸ್ವಾಧೀನಾಧಿಕಾರಿ ವಿವೇಕ್, ನೈರುತ್ಯ ರೈಲ್ವೇ ಮುಖ್ಯ ಇಂಜಿನಿಯರ್ ಪರದೀಪ್ ಪುರಿ, ಕಾರ್ಯಪಾಲಕ ಇಂಜಿನಿಯರ್ ರಜತ್ ತುನಹಾ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಬಿ.ಪುರುಷೋತಮ್, ವಿಭಾಗೀಯ ಸಹಾಯಕ ಇಂಜಿನಿಯರ್ ನಿತ್ಯಾನಂತದ ಸ್ವಾಮಿ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ವಸತಿ ಶಾಲೆ: ವಿಶೇಷ ಪ್ರವರ್ಗಗಳ ವಿದ್ಯಾರ್ಥಿಗಳಿಗೆ ನೇರ ಪ್ರವೇಶಕ್ಕೆ ಅವಕಾಶ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಏಕಲವ್ಯ, ಡಾ.ಬಿ.ಆರ್. ಅಂಬೇಡ್ಕರ್, ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಗಳ 2024-25ನೇ ಸಾಲಿನ 6ನೇ ತರಗತಿ ಪ್ರವೇಶಕ್ಕೆ ವಿಶೇಷ ವರ್ಗಗಳ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ನೇರ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 13 ಕೊನೆಯ ದಿನವಾಗಿದೆ. ಸಫಾಯಿ ಕರ್ಮಚಾರಿಗಳ ಮಕ್ಕಳು, ಶೇ.25ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ವಿಶೇಷ ಚೇತನ ಮಕ್ಕಳು, ಒಬ್ಬ ಪೋಷಕರನ್ನು ಹೊಂದಿರುವ ಮಕ್ಕಳು, ಚಿತಾಗಾರದ ಕಾರ್ಮಿಕರ ಮಕ್ಕಳು, ಅನಾಥ ಮಕ್ಕಳು, ಸ್ಮಶಾನ ಕಾರ್ಮಿಕ ಮಕ್ಕಳು, ಅಲೆಮಾರಿ, ಅರೆಅಲೆಮಾರಿ ಸಮುದಾಯಗಳಿಗೆ ಸೇರಿದ ಮಕ್ಕಳು, ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಮಕ್ಕಳು, ಯೋಜನೆಗಳಿಂದ ಸ್ಥಳಾಂತರಗೊಂಡ ಪೋಷಕರ ಮಕ್ಕಳು, ಬಾಲ ಕಾರ್ಮಿಕ ಮಕ್ಕಳು, ಸೇವಾನಿರತ ಸೈನಿಕರ ಮಕ್ಕಳು, ಜೀತವಿಮುಕ್ತ ಮಕ್ಕಳು, ನಿವೃತ್ತ ಸೈನಿಕ ಸಿಬ್ಬಂದಿ ಮಕ್ಕಳು, ರಕ್ಷಿಸಲ್ಪಟ್ಟ ದೇವದಾಸಿಯರ ಮಕ್ಕಳು, ಎಸ್.ಸಿ, ಎಸ್.ಟಿ ಆಶ್ರಮ ವಸತಿ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳು ಹಾಗೂ ಹೆಚ್.ಐ.ವಿ ಗೆ ತುತ್ತಾದ ಪೋಷಕರ ಮಕ್ಕಳು ಮಕ್ಕಳು ಕೆಇಎ ವೆಬ್‌ಸೈಟ್ https://cetonline.karnataka.gov.in/kreis24d/ ನಲ್ಲಿ ವಿದ್ಯಾರ್ಥಿಯ ಎಸ್‌ಎಟಿಎಸ್ ಸಂಖ್ಯೆ ದಾಖಲಿಸಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದ ವಿಶೇಷ ವರ್ಗದ ಪ್ರಮಾಣಪತ್ರವನ್ನು ಅಪ್ಲೋಡ್ ಮಾಡಿದಾಗ ತಮ್ಮ ವಿಶೇಷ ವರ್ಗಕ್ಕೆ ಲಭ್ಯವಿರುವ ಸೀಟುಗಳ ವಿವರ ಲಭಿಸುತ್ತದೆ. ಒಂದು ವೇಳೆ ನಿಗದಿತ ವಿಶೇಷ ವರ್ಗಕ್ಕೆ ಸೀಟು ಲಭ್ಯವಿಲ್ಲದೇ ಇದ್ದಲ್ಲಿ ಸೀಟುಗಳ ಸಂಖ್ಯೆ 0 ಎಂದು ಪ್ರದರ್ಶಿತವಾಗುತ್ತದೆ. ಸೀಟು ಲಭ್ಯವಿದ್ದಲ್ಲಿ ಅಭ್ಯರ್ಥಿಯ ದಾಖಲಾತಿ ಆದೇಶವನ್ನು ಮುದ್ರಿಸಿಕೊಂಡು ಸಂಬಂಧಪಟ್ಟ ವಸತಿ ಶಾಲೆಯಲ್ಲಿ ಪ್ರವೇಶ ಪಡೆಯಬಹುದಾಗಿದೆ. ಜಿಲ್ಲೆಯ ವಿವಿಧ ವಸತಿ ಶಾಲೆಗಳಲ್ಲಿ ವಿಶೇಷ ವರ್ಗದ ಅಭ್ಯರ್ಥಿಗಳಿಗೆ ಮೀಸಲಿಟ್ಟಿರುವ ಸ್ಥಾನಗಳಲ್ಲಿ 565 ಸ್ಥಾನಗಳು ಪ್ರಸ್ತುತ ಖಾಲಿ ಇವೆ. ಹೆಚ್ಚಿನ ಮಾಹಿತಿಗಾಗಿ ಸಮೀಪದ ಕ್ರೈಸ್ (ಏಖಇಖಖ) ವಸತಿ ಶಾಲೆಯ ಪ್ರಾಂಶುಪಾಲರನ್ನು ಅಥವಾ ಸಮಾಜ ಕಲ್ಯಾಣ ಇಲಾಖೆಯ ಸಹಾಯವಾಣಿ "ಕಲ್ಯಾಣ ಮಿತ್ರ" ಸಂಖ್ಯೆ 9482300400 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.

### ಇಂದು ನಾಯಕನಹಟ್ಟಿ ಗಡಿಯಲ್ಲಿ ಭವ್ಯ ಸ್ವಾಗತ

» **ಮೊದಲ ಪುಟದಿಂದ**

ನಗರದ ವಿವಿಧ ಶಾಲೆಗಳ ಸುಮಾರು ಎರಡು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ತಾಲ್ಲೂಕು ಮಟ್ಟದ ಅಧಿಕಾರಿಗಳು, ಎಲ್ಲಾ ಹಂತದ ಚುನಾಯಿತ ಪ್ರತಿನಿಧಿಗಳು ಮೆರವಣಿಗೆಯಲ್ಲಿ ಭಾಗವಹಿಸುವರು ಎಂದು ತಿಳಿಸಿದರು. ನೆಹರೂ ಸರ್ಕಲ್ ಮೂಲಕ ಅಂಬೇಡ್ಕರ್, ವಾಲ್ಮೀಕಿ ವೃತ್ತದಿಂದ ಮೆರವಣಿಗೆ ನಡೆಯುವುದು ಅಂಬೇಡ್ಕರ್ ವೃತ್ತದಲ್ಲಿ ಕಾರ್ಯಕ್ರಮವನ್ನು ಉದ್ದೇಶಿಸಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಮಾತನಾಡುವರು.

**ಭವ್ಯಸ್ವಾಗತ** : ಕನ್ನಡ ಜ್ಯೋತಿರಥ ಚಿತ್ರದುರ್ಗ ನಗರದಿಂದ ತುರುವನೂರು ಮಾರ್ಗವಾಗಿ ನಾಯಕನಹಟ್ಟಿ ಗ್ರಾಮದ ಚಳ್ಳಕೆರೆ ಗಡಿಯನ್ನು ಪ್ರವೇಶಿಸಿದ ಸಂದರ್ಭದಲ್ಲಿ ಎಲ್ಲರೂ ಹರ್ಷೋದ್ಗಾರದಿಂದ ರಥವನ್ನು ಸ್ವಾಗತಿಸಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ತಾಲ್ಲೂಕು ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ತಹಶೀಲ್ದಾರ್ ರೇಹಾನ್‌ಪಾಷ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ಪಟ್ಟಣಪಂಚಾಯಿತಿ ಮುಖ್ಯಾಧಿಕಾರಿ ಪಿ.ಪಾಲಯ್ಯ, ಡಾ.ಕೆ.ಚಿತ್ತಯ್ಯ, ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು, ಸರ್ಕಾರಿ ಅಧಿಕಾರಿಗಳು ಉಪಸ್ಥಿತರಿದ್ದರು.


### ಲಿಂಗತ್ವ ಅಲ್ಪಸಂಖ್ಯಾತರಿಗೆ ಗೃಹಲಕ್ಷ್ಮಿ ಸೌಲಭ್ಯ

» **ದಾವಣಗೆರೆ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಲಿಂಗತ್ವ ಅಲ್ಪಸಂಖ್ಯಾತ ಸಮುದಾಯದವರು ಅಥವಾ ಲಿಂಗತ್ವ ಅಲ್ಪಸಂಖ್ಯಾತ ವ್ಯಕ್ತಿಗಳು ಗೃಹಲಕ್ಷ್ಮಿ ಯೋಜನೆಯಡಿ ಸೌಲಭ್ಯಕ್ಕಾಗಿ ಅರ್ಹ ಲಿಂಗತ್ವ ಅಲ್ಪಸಂಖ್ಯಾತ ಸಮುದಾಯದವರಿಂದ ಅರ್ಜಿ ಆಹ್ವಾನಿಸಲಾಗಿದೆ. ಗೃಹಲಕ್ಷ್ಮಿ ಯೋಜನೆಯ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ನ್ಯಾಷನಲ್ ಪೋರ್ಟಲ್ ಟ್ರಾನ್ಸ್‌ಜೆಂಡರ್ ಪರ್ಸನ್ಸ್ (National Portal for Transgender persons) ವತಿಯಿಂದ ಪಡೆದಿರುವ ಲಿಂಗತ್ವ ಅಲ್ಪಸಂಖ್ಯಾತರ ಗುರುತಿನ ಚೀಟಿ, ಪಾಸ್‌ಪೋರ್ಟ್ ಅಳತೆಯ ಫೋಟೋ ಮತ್ತು ಆಧಾರ್ ಕಾರ್ಡ್‌ನೊಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರ ಕಚೇರಿ, ಕುವೆಂಪು ನಗರ, ಎಂ.ಸಿ.ಸಿ. ಬಿ. ಬ್ಲಾಕ್, 14 ನೇ ಮುಖ್ಯ ರಸ್ತೆ, ದಾವಣಗೆರೆ ಇಲ್ಲಿಗೆ ಸಲ್ಲಿಸಬಹುದಾಗಿದೆ.

# ಸಿಎಂ ಸ್ಥಾನಕ್ಕೆ ಸಿದ್ದು ರಾಜೀನಾಮೆ ನೀಡಲಿ

» **ಚಿತ್ರದುರ್ಗ**




ನಾನು ಭ್ರಷ್ಟಾಚಾರ ಸಹಿಸಲ್ಲ ಎಂದು ಹೇಳುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೇಲೆ ರಿಯಲ್ ಎಸ್ಟೇಟ್ ಹಾಗೂ ಹಣಕಬಳಿಕೆ ಆರೋಪ ಬಂದಿರುವುದರಿಂದ ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ, ನಾವು ಸಾಚಾ ಇದ್ದೇವೆ ಎಂದು ರಾಜ್ಯದ ಜನರಿಗೆ ಸಾರಿ ಸಾರಿ ಹೇಳಬೇಕು ಎಂದು ಸಂಸದ ಗೋವಿಂದ ಕಾರಜೋಳ ಆಗ್ರಹಿಸಿದ್ದಾರೆ.

ನಗರದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಧಿಕಾರಕ್ಕೆ ಬಂದ ಬಳಿಕ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಒಂದು ರೂಪಾಯಿ ಅಭಿವೃದ್ಧಿ ಕಾರ್ಯ ಮಾಡಲಿಲ್ಲ. ಬದಲಾಗಿ ಸ್ವಜನ ಪಕ್ಷಪಾತದಲ್ಲಿ ಸಿಲುಕಿ, ತಮ್ಮ ಸ್ವಾರ್ಥಕ್ಕಾಗಿ ಅಧಿಕಾರ ಮಾಡುತ್ತಿದೆ ಎಂದು ಆರೋಪಿಸಿದರು.

ಸಿದ್ದರಾಮಯ್ಯ ಅಧಿಕಾರಕ್ಕೆ ಬಂದಾಗಿನಿಂದ ಸಾಕಷ್ಟು ಆರೋಪಗಳು ಬರುತ್ತಿವೆ. ಆದರೂ ಕೂಡ ನಾನು ಯಾವುದೇ ಭ್ರಷ್ಟಾಚಾರ ಮಾಡಿಲ್ಲ ಎಂದು ಸಮರ್ಥನೆ ಮಾಡಿಕೊಳ್ಳುವ ಕೆಲಸ ಮಾಡುತ್ತಿದ್ದಾರೆ. ಯಾವುದೇ ಆಪಾದನೆಗಳು ಬಂದ ಮೇಲೆ ನಿಷ್ಪಕ್ಷಪಾತವಾಗಿ ತನಿಖೆ ನಡೆಸಲು ಅವಕಾಶ ನೀಡಬೇಕು. ಈ ಹಿಂದೆ ರಾಮಕೃಷ್ಣ ಹೆಗಡೆ ಅವರ ಮೇಲೆ ಟೆಲಿಫೋನ್ ಕದ್ದಾಲಿಕೆ ಆರೋಪ ಬಂದಾಗ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಅದೇ ರೀತಿ ಇಂದು ಸಿದ್ದರಾಮಯ್ಯ ಕೂಡ ಮುಂದಾಗಬೇಕು ಎಂದರು.

ಸಿದ್ದರಾಮಯ್ಯ ಅವರು 3 ಎಕರೆ 20 ಗುಂಟೆ ಜಮೀನನ್ನು ಡಿ.ನೋಟಿಫಿಕೇಷನ್ ಮಾಡಿ ತಮ್ಮ ಹೆಂಡತಿಗೆ ಕೊಟ್ಟಿದ್ದಾರೆ. ಅಲ್ಲದೆ 50-50 ಅನುಪಾತದಲ್ಲಿ ನಿವೇಶನ ಹಂಚಿಕೆ ಮಾಡಿದ್ದಾರೆ ಇದು ಕೂಡ ಸರ್ಕಾರದ ಸುತ್ತೋಲೆ ಪ್ರಕಾರ ತಪ್ಪಾಗಿದ್ದು, ಇದರಲ್ಲೇ ಸ್ಪಷ್ಟವಾಗಿ ಕಾಣುತ್ತಿದೆ ಅಕ್ರಮ ನಡೆದಿದೆ ಎಂಬುದು. ಆದ್ದರಿಂದ ಸಿದ್ದರಾಮಯ್ಯ ಹಾಗೂ ಸಂಬಂದ ಪಟ್ಟ ಸಚಿವರು ರಾಜೀನಾಮೆ ಕೊಟ್ಟು ನಾವು ಸಾಚಾ ಇದೀವಿ ಎಂಬುದನ್ನು ತೋರಿಸಬೇಕು ಎಂದು ಒತ್ತಾಯಿಸಿದರು.

ಎಸ್ಸಿ, ಎಸ್ಟಿ ಹಣವನ್ನು ದುರುಪಯೋಗ ಮಾಡಿಕೊಂಡಿದ್ದಾರೆ. ಬೇನಾಮಿ ಅಕೌಂಟ್ಗಳಿಗೆ ಹಣ ಜಮೆ ಆಗುತ್ತೆ ಎಂದರೆ ಏನು ಅರ್ಥ. 187 ಕೋಟಿ ರೂ ಹಗರಣ ನಡೆಸಿ, ಬೇರೆ ಬೇರೆ ಬ್ಯಾಂಕ್ನಲ್ಲಿ ಖಾತೆ ತೆರೆದು ಹಣ ಜಮೆ ಮಾಡಿರುವುದು ಇತಿಹಾಸದಲ್ಲೇ ಮೊದಲು. ಇದಕ್ಕೆ ಸಿದ್ದರಾಮಯ್ಯ ನೇರ ಹೊಣೆ ಹೊರಬೇಕು. ವಾಲ್ಮೀಕಿ ನಿಗಮದ ಹಗರಣದಲ್ಲಿ ಇಡಿ ಬಂದಿರುವುದು ಬ್ಯಾಂಕುಗಳ ಕಾರಣಕ್ಕೆ. ಇದೊಂದು ಅಂತರ ರಾಜ್ಯ ಹಗರಣ. ಬ್ಯಾಂಕ್ ಕೇಂದ್ರದ ವ್ಯಾಪ್ತಿಗೆ ಬರುತ್ತವೆ. ಈ ಪ್ರಕರಣದಲ್ಲಿ ನೀವು ತಪ್ಪೇ ಮಾಡಿಲ್ಲ ಅನ್ನುವುದಾದರೆ ಭೈರತಿ ಸುರೇಶ್ ಓಡಿ ಹೋಗಿ ಅಧಿಕಾರಿಗಳನ್ನು ಅಮಾನತು ಮಾಡಿದ್ಯಾಕೆ. ಎಲ್ಲ ದಾಖಲೆಗಳನ್ನು ಬೆಂಗಳೂರಿಗೆ ತರಲಾಗಿದೆ. ತಿದ್ದುವ ಸಾಧ್ಯತೆ ಇದೆ. ಈ ಹಿನ್ನಲೆಯಲ್ಲಿ ಅವರು ಮೌಲ್ಯಾಧಾರಿತ ರಾಜಕಾರಣಿ ಎನ್ನುವುದನ್ನು ಸಾಬೀತು ಮಾಡಲಿ ಎಂದು ತಿಳಿಸಿದರು.

ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರೀಯಲ್ ಎಸ್ಟೇಟ್ ಹಗರಣ ಮಾಡಿದೆ. ಈ ಹಗರಣಗಳ ಕುರಿತು ಸದನದಲ್ಲಿ ಚರ್ಚೆ ನಡೆಸಲು ಮುಂದಾದರೆ ಅಂತಹ ಶಾಸಕರನ್ನು ಸಿದ್ದರಾಮಯ್ಯನವರು ಸದನದಲ್ಲೇ ಬೆದರಿಸುವ ತಂತ್ರಗಾರಿಕೆಯಲ್ಲಿ ಮಾತನಾಡುತ್ತಾರೆ. ಮತ್ತೊಂದೆಡೆ ನಾನು ಭ್ರಷ್ಟಚಾರ ರಹಿತ ವ್ಯಕ್ತಿ ಎಂದು ಹೇಳುತ್ತಾರೆ. ಇದರಲ್ಲಿ ಸತ್ಯ ತಿಳಿಯಬೇಕಾದರೆ ಸೂಕ್ತ ತನಿಖೆ ಆಗಬೇಕು ಆದ್ದರಿಂದ ಸಿದ್ದರಾಮಯ್ಯ ಅವರು ನೈತಿಕ ಹೊಣೆ ಹೊತ್ತು ತಮ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಗೌರವ ಉಳಿಸಿಕೊಳ್ಳಬೇಕು. ಪ್ರಕರಣಗಳನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಆಗ್ರಹಿಸಿದರು. ಪ್ರಧಾನಿಗೆ ಅಗೌರವದಿಂದ ಮಾತನಾಡುವ ರಾಹುಲ್ ಗಾಂಧಿ ತಮ್ಮ ಕಾಂಗ್ರೆಸ್ ಮುಖ್ಯಮಂತ್ರಿ ಸಿದ್ದರಾಮಯ್ಯ ಏನೆಲ್ಲಾ ಹಗರಣ ಮಾಡಿದ್ದಾರೆ ಎಂಬುದರ ಬಗ್ಗೆ ಸಂಸತ್ನಲ್ಲಿ ಮಾತನಾಡಬೇಕು ಎಂದು ಒತ್ತಾಯಿಸಿ ಮೈಸೂರಿನಲ್ಲಿ ಜಮೀನು ಕಳೆದುಕೊಂಡವರು ಬಡವರು, ಆದರೆ ನಿವೇಶನ ಪಡೆದವರು ಶ್ರೀಮಂತರಾಗಿದ್ದಾರೆ. ಸೈಟುಗಳನ್ನು ಬಿಟ್ಟುಕೊಡುತ್ತೇನೆ ಎಂದು ಹೇಳುವ ಸಿದ್ದರಾಮಯ್ಯ ಅವರ ಉದಾರತೆ ನಮಗೆ ಬೇಡವಾಗಿದ್ದು, ರಾಜೀನಾಮೆ ಕೊಟ್ಟು ಪ್ರಕರಣವನ್ನು ಎದುರಿಸಬೇಕು ಎಂದು ಆಗ್ರಹಿಸಿದರು.

ಮುಖ್ಯಮಂತ್ರಿಗಳೇ ಅತೀ ದೊಡ್ಡ ರಿಯಲ್ ಎಸ್ಟೇಟ್ ಹಗರಣದಲ್ಲಿ ಭಾಗಿಯಾಗಿರುವುದು ರಾಜ್ಯದ ಇತಿಹಾಸದಲ್ಲಿ ಮೊದಲು. ಮುಡಾದಲ್ಲಿ ನಿವೇಶನಕ್ಕಾಗಿ 62 ಸಾವಿರ ಜನ ಅರ್ಜಿ ಹಾಕಿ ಕಾಯುತ್ತಿದ್ದಾರೆ. ಆದರೆ, ಮುಖ್ಯಮಂತ್ರಿ ತಮ್ಮ ಅಧಿಕಾರ, ಪ್ರಭಾವ ಬಳಸಿ 1995 ರ ಕಾಯ್ದೆ ಅನ್ವಯ ಎಂದು ಉಲ್ಲೇಖಿಸಿ, ಅರ್ಕಾವತಿ ಬಡಾವಣೆಗೆ 2005 ರಲ್ಲಿ ರೂಪುಗೊಂಡ ನಿಯಮವನ್ನು ಬಳಕೆ ಮಾಡಿಕೊಂಡು ಮೈಸೂರಿನ ವಿಜಯನಗತದಂತಹ ಬಡಾವಣೆಗಳಲ್ಲಿ ನಿವೇಶನ ತೆಗೆದುಕೊಂಡಿದ್ದಾರೆ' ಎಂದು ಆರೋಪಿಸಿದರು.

2010 ರಲ್ಲಿ ಸಿದ್ದರಾಮಯ್ಯ ಪತ್ನಿ ಹೆಸರಿಗೆ ಜಮೀನು ಬಂದಿದೆ. ಆದರೆ, ಅದಕ್ಕಿಂತ ಹಿಂದೆಯೇ ರಚನೆಯಾದ ಬಡಾವಣೆಯಲ್ಲಿ ನಿವೇಶನ ಪಡೆದಿದ್ದಾರೆ. ಸಮಾಜದಲ್ಲಿ ಸಾಧನೆ ಮಾಡಿದವರಿಗೆ ಶೇ.25 ರಷ್ಟು ನಿವೇಶನ ಕೊಡಬೇಕು. ಆದರೆ, ಅಲ್ಲಿಯೂ ಇವರು ಕೈ ಹಾಕಿದ್ದಾರೆ. ಕೆಸರೆ ಜಮೀನಿನಲ್ಲಿ ಸಿದ್ದರಾಮಯ್ಯ ಕೈ ಕೆಸರಾಗಿದೆ ಎಂದು ದೂರಿದರು. ಶಾಸಕರಾದ ಎಂ.ಚಂದ್ರಪ್ಪ, ಕೆ.ಎಸ್.ನವೀನ್, ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ, ಜಿಲ್ಲಾಧ್ಯಕ್ಷ ಮುರುಳಿ ಮಂಡಲ ಅಧ್ಯಕ್ಷ ನವೀನ್ ಚಾಲುಕ್ಯ, ಗ್ರಾಮಾಂತರ ಅಧ್ಯಕ್ಷ ಕಲ್ಲೇಶಯ್ಯ, ಪ್ರಧಾನ ಕಾರ್ಯದರ್ಶಿ ಸುರೇಶ್ಸಿದ್ದಾಪುರ, ಸಂಪತ್ತುಕುಮಾರ್, ವಕ್ತಾರರಾದ ನಾಗರಾಜ್ ಬೇದ್ರೇ, ದಗ್ಗೆ ಶಿವಪ್ರಕಾಶ್, ರೈತ ಮೋರ್ಚಾದ ಅಧ್ಯಕ್ಷ ವೆಂಕಟೇಶ್ ಯಾದವ್, ರಾಮರೆಡ್ಡಿ, ತಿಪ್ಪೇಸ್ವಾಮಿ, ಸೇರಿದಂತೆ ಇತರರು ಹಾಜರಿದ್ದರು.

## ಮಹಡಿ ಶಿವಮೂರ್ತಿ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಆಯ್ಕೆ

» **ಚಿತ್ರದುರ್ಗ**




ಅಖಿಲ ಭಾರತ ವೀರಶೈವ ಮಹಾಸಭಾದ ಚಿತ್ರದುರ್ಗ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಮಹಡಿ ಶಿವಮೂರ್ತಿ ಹಾಗೂ ಚಿತ್ರದುರ್ಗ ತಾಲ್ಲೂಕು ಅಧ್ಯಕ್ಷರಾಗಿ ಪಿ.ಎಂ.ಸಿದ್ದಪ್ಪ ರವರು ಅವಿರೋಧ ಆಯ್ಕೆಯಾಗಿದ್ದಾರೆ ಎಂದು ಉಪ ಚುನಾವಣಾ ಆಧಿಕಾರಿ ಟಿ.ಪಿ.ಜ್ಞಾನಮೂರ್ತಿ ತಿಳಿಸಿದ್ದಾರೆ.

ನಿರ್ದೇಶಕರಾಗಿ ಪಿ.ವಿರೇಂದ್ರಕುಮಾರ್, ಸಿ.ರುದ್ರಪ್ಪ ಜಾಲಿಕಟ್ಟೆ, ಎಂ.ಶಶಿಧರ್, ಪ್ರಸನ್ನ ಕುಮಾರ್, ಬಿ.ಪಿ.ಬಸವರಾಜ್, ಹೆಚ್.ಎನ್.ಪ್ರಭಾಕರ್, ವಿ.ಜಿ. ಪರಮೇಶ್ವರಪ್ಪ, ಎಸ್.ಜಯ್ಯಣ್ಣ, ಜೆ.ಎಂ.ಶಿವಾನಂದ, ಕೆ.ಬಿ.ಬಸವರಾಜಯ್ಯ, ರುದ್ರೇಶ್ಐಗಳ್, ಗಂಗಾಧರಪ್ಪ ಎ.ಸಿ, ಎಂ.ಶಶಿಧರ್‌ಬಾಬು, ಕೆ.ಎಂ.ನಾಗರಾಜ್, ಡಿಎಸ್.ಮಹೇಶ್, ಸುರೇಶ್ ಎಂ.ಟಿ. ಬಿ.ಪಿ.ಓಂಕಾರಪ್ಪ, ಎನ್.ಎಂ.ವಿನಯ್ ಕುಮಾರ್ ಆಯ್ಕೆಯಾಗಿದ್ದಾರೆ.

ಜಿಲ್ಲಾ ಮಹಿಳಾ ಘಟಕಕ್ಕೆ ನಿರ್ದೇಶಕರಾಗಿ ಆರ್.ಇ.ಶ್ಯಾಮಲಾ, ಬಿ.ಗೀತಾ, ನಾಗಲಾಂಬಿಕ ಕಲ್ಮಟ್, ಎಸ್.ಬಿ.ಸುಧಾ, ಅನ್ನಪೂರ್ಣ ಪ್ರಕಾಶ್, ಎಂ.ಎನ್.ವಿಜಯಲಕ್ಷ್ಮೀ, ಎಸ್.ರಾಜೇಶ್ವರಿ ಕೆ.ಜಿ.ರೀನಾ ಹಾಗೂ ಪಿ.ಬಿ.ನಿರ್ಮಲಾ ಆಯ್ಕೆಯಾಗಿದ್ದಾರೆ.

ಚಿತ್ರದುರ್ಗ ತಾಲ್ಲೂಕು ಘಟಕದ ನಿರ್ದೇಶಕರಾಗಿ ಎಂ.ವಿ.ಚನ್ನಯ್ಯ, ಪರಶಿವಯ್ಯ ಬಿ. ಹರೀಶ್‌ಕುಮಾರ್ ಬಿ. ಹೆಚ್.ಎನ್. ಹನುಮಂತಪ್ಪ, ದಿನೇಶ್ ಕುಮಾರ್‌ಜಿ.ಎನ್. ಎಸ್.ಟಿ.ಮಲ್ಲಿಕಾರ್ಜುನ್, ಡಿ.ಆರ್‌ಮಂಜುನಾಥ್, ಜಿ.ಸಿ.ಶಿವಣ್ಣ, ಎಸ್.ಇ.ರವೀಶ್ವರ ಚನ್ನಬಸವಯ್ಯ, ಎಸ್.ಜಿ.ಸುರೇಶ್ ಬಾಬು, ಹೆಚ್.ವಿ.ಲಿಂಗಬಸಪ್ಪ ಹಾಗೂ ಟಿ.ಸುರೇಶ್ ಆಯ್ಕೆಯಾಗಿದ್ದಾರೆ.

ಮಹಿಳಾ ನಿರ್ದೇಶಕರಾಗಿ ಪಿ.ಎಸ್. ಜಯಶೀಲ, ಕೆ.ಎನ್ ನಂದಿನಿ, ವನಜಾಕ್ಷಮ್ಮ ವಿ. ಭುವನೇಶ್ವರಿ ಗೌಳಿ ಪಿ.ಎಸ್. ಮಧುಶ್ರೀ ಡಿ.ಎಂ. ಹಾಗೂ ಶೀಲಾ ಆರ್, ಇವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಸಹಾಯಕ ಚುನಾವಣಾಧಿಕಾರಿಗಳಾಗಿ ದಯಾನಂದ ಪಟೇಲ್.ಟಿ. ಹಾಗೂ ಜಿ.ನಾಗಭೂಷಣ ರವರು ಕಾರ್ಯ ನಿರ್ವಹಿಸಿದರು.

## ಕೆಬಿಎನ್‌ಮೆಟ್‌ಲೈಫ್‌ಅಡಿ ಮೃತ ಶಿವಕುಮಾರ್ ಪತ್ನಿಗೆ 50 ಲಕ್ಷ ಚೆಕ್ ವಿತರಣೆ




» **ಚಳ್ಳಕೆರೆ**

ಕಳೆದ ಹಲವಾರು ದಶಕಗಳಿಂದ ರಾಜ್ಯದ ಜನತೆಯ ವಿಶ್ವಾಸವನ್ನು ಗಳಿಸಿರುವ ಕರ್ನಾಟಕ ಬ್ಯಾಂಕ್ ವಿವಿಧ ಯೋಜನೆಗಳಿಂದ ಸಾರ್ವಜನಿಕರಿಗೆ ಆರ್ಥಿಕ ನೆರವು ನೀಡುವುದಲ್ಲದೆ, ಬ್ಯಾಂಕ್‌ನಲ್ಲಿ ಉಳಿತಾಯ ಖಾತೆ ಹೊಂದಿರುವ ಕೆಬಿಎನ್‌ಮೆಟ್‌ಲೈಫ್ ಪಾಲಿಸಿದಾರರಿಗೆ ಅವರ ಮೃತಪಟ್ಟ ಸಂದರ್ಭದಲ್ಲಿ ಪಾಲಿಸಿಯ ಪೂರ್ಣಮೊತ್ತವನ್ನು ಅವರ ನಮೂದಿಸಿದ ನಾಮಿನಿ ಸದಸ್ಯರಿಗೆ ನೀಡುವ ಮೂಲಕ ಅವರ ಬದುಕಿಗೆ ಆಸರೆಯಾಗುವುದಲ್ಲದೆ, ಆತ್ಮವಿಶ್ವಾಸವನ್ನು ಮೂಡಿಸುವಲ್ಲಿ ಸಹಕಾರಿಯಾಗಿದೆ ಎಂದು ಕರ್ನಾಟಕ ಬ್ಯಾಂಕ್‌ನ ತುಮಕೂರು ವಿಭಾಗದ ಮುಖ್ಯ ವ್ಯವಸ್ಥಾಪಕ ಸುದೀಂದ್ರಪಂಚಮುಖಿ ತಿಳಿಸಿದರು.

ಅವರು, ಗುರುವಾರ ನಗರದ ಕರ್ನಾಟಕ ಬ್ಯಾಂಕ್ ಶಾಖೆಯಲ್ಲಿ ಮೇಲ್ಕಂಡ ಕೆಎನ್‌ಬಿ ಯೋಜನೆಯ ಪಾಲಿಸಿದಾಗ, ವಿಜ್ಞಾನ ಶಿಕ್ಷಕ ದಿವಂಗತ ಎಸ್.ಶಿವಕುಮಾರ್ ಪತ್ನಿ ಮಹಾಲಕ್ಷ್ಮಿಯವರಿಗೆ ಪಾಲಿಸಿಯ ಪ್ರಿಮಿಯಂ ಮೊತ್ತ 50 ಲಕ್ಷದ ಚೆಕನ್ನು ವಿತರಿಸಿ ಮಾತನಾಡಿದರು. ಪ್ರಸ್ತುತ ನಮ್ಮ ಬ್ಯಾಂಕ್‌ನಲ್ಲಿ ಮಾತ್ರ ಸರ್ಕಾರಿ ನೌಕರರೂ ಸೇರಿದಂತೆ ಎಲ್ಲಾ ಸಾರ್ವಜನಿಕರಿಗೂ ಈ ಸೌಲಭ್ಯ ನೀಡಲಾಗುತ್ತದೆ. ಕೆಬಿಎನ್ ಕೆಬಿಎನ್‌ಮೆಟ್‌ಲೈಫ್ ಮತ್ತು ಪಿಎನ್‌ಬಿ ಯೋಜನೆಗಳಲ್ಲಿ ಹೆಸರು ನೊಂದಾಯಿಸಿದ ಪಾಲಿಸಿ ಮೊತ್ತವನ್ನು ಪಾವತಿಸಿ ಮರಣಹೊಂದಿದ ಖಾತೆದಾರರ ಕುಟುಂಬಕ್ಕೆ ಈ ನೆರವನ್ನು ನೀಡಲಾಗುವುದು ಎಂದರು. ಶಾಖಾ ವ್ಯವಸ್ಥಾಪಕ ಶಿವಪ್ರಸಾದ್‌ನಾಡಗೌಡ ಮಾತನಾಡಿ, ದಿವಂಗತ ಎಸ್.ಶಿವಕುಮಾರ್ ಮನೆ ಸಾಲದ ಜೊತೆಗೆ ಕೆಬಿಎನ್‌ಮೆಟ್‌ಲೈಫ್ ಪಾಲಿಸಿಯನ್ನು ಸಹ ಹೊಂದಿದ್ದು, ಪಾಲಿಸಿಯ ನಾಲ್ಕು ಕಂತುಗಳನ್ನು ಪಾವತಿಸಿದ್ದರು. ಅವರ ಮರಣದ ನಂತರ ಮೊತ್ತವನ್ನು ಅವರ ಪತ್ನಿ ಮಹಾಲಕ್ಷ್ಮಿಗೆ ನೀಡಲಾಗಿದ್ದು, ಅವರ ಮನೆಯ ಸಾಲವೂ ಸಹ ಮನ್ನಾ ಮಾಡಿ ಅದರಿಂದ ಪ್ರೀಮಿಯಂ ಹಣ ಸುಮಾರು 27 ಲಕ್ಷ ಮರಳಿ ಅವರಿಗೆ ವಾಪಾಸ್ ನೀಡಲಾಗುವುದು ಎಂದರು.

## ಹಿರಿಯರ ಸೇವೆಯನ್ನು ನಾವೆಲ್ಲರೂ ಪ್ರಶಂಸಿಸಬೇಕು: ತಿಪ್ಪಣ್ಣಮರಿಕುಂಟೆ

» **ಚಳ್ಳಕೆರೆ**

ಆಧುನಿಕತೆಯ ಬದುಕಿಗೆ ಮಾರುಹೋದ ನಾವುಗಳು ನಮ್ಮ ಸಂಸ್ಕೃತಿ, ಸಂಸ್ಕಾರವನ್ನು ಮರೆತು ಸಾಗಿದ್ದೇವೆ. ಕಳೆದ ನೂರಾರು ವರ್ಷಗಳಿಂದ ನಮ್ಮ ಸಮಾಜಕ್ಕೆ ಆಧಾರಸ್ತಂಭವಾಗಿ ಮಾರ್ಗದರ್ಶನ ಮಾಡಿದ ಅನೇಕ ಹಿರಿಯರ ತ್ಯಾಗಬಲಿದಾನಗಳು ಇಂದು ನಮ್ಮನ್ನು ಉತ್ತಮ ಸ್ಥಿತಿಯತ್ತ ತೆಗೆದುಕೊಂಡುಹೋಗಿವೆ. ಗ್ರಾಮೀಣ ಭಾಗದ ಜನರ ಬದುಕು ಸದಾಹಸಿರಾಗಿ ನೆಮ್ಮದಿಯಿಂದ ಇರುವಂತೆ ನೋಡಿಕೊಳ್ಳಬೇಕು. ಸವಾಲುಗಳನ್ನು ಮೆಟ್ಟಿನಿಂತು ಗುಣಾತ್ಮಕ ಜೀವನ ನಡೆಸಿ ಸಾರ್ಥಕತೆಯ ಮೆರೆಯಬೇಕೆಂದು




ಖ್ಯಾತಸಾಹಿತಿ ಬಿ.ತಿಪ್ಪಣ್ಣಮರಿಕುಂಟೆ ತಿಳಿಸಿದರು.

ಅವರು, ತಾಲ್ಲೂಕಿನ ದೇವರಮರಿಕುಂಟೆ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಶ್ರೀಮಹರ್ಷಿ ವಾಲ್ಮೀಕಿ ಗಿರಿಜನ ವಿದ್ಯಾಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಅವಧಿಯಲ್ಲಿ ವಿನಯದಿಂದ ವಿದ್ಯೆ ಕಲಿಯಬೇಕು. ನೀವು ಕಲಿತ ವಿದ್ಯೆ ನಿಮ್ಮ ಬದುಕಿಗೆ ಆಸರೆಯಾಗಲಿದೆ. ಆದ್ದರಿಂದ ಬೇರೆ ಕೆಟ್ಟ ಹವ್ಯಾಸಗಳಿಗೆ ಬಲಿಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಿಕ್ಷಕ ವಿ.ದೊಡ್ಡಯ್ಯ ಮಾತನಾಡಿ, ಪ್ರತಿಯೊಬ್ಬ ವ್ಯಕ್ತಿಯೂ ತನ್ನದೇಯಾದ ಮೌಲ್ಯವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕಿದೆ.

**ಪ್ರಮುಖ ಸುದ್ದಿ**

# ಕಕ್ಷಿದಾರರ ಸಮಯ, ಶುಲ್ಕ ಉಳಿಸಲು ಅದಾಲತ್ ಸಹಕಾರಿ

» **ದಾವಣಗೆರೆ**




ಸಂವಿಧಾನವು ಎಲ್ಲಾ ನಾಗರೀಕರಿಗೆ ಹಕ್ಕುಗಳನ್ನು ನೀಡಿದ್ದು, ಸಂವಿಧಾನದ ಹಕ್ಕುಗಳಲ್ಲಿ ನ್ಯಾಯವೂ ಕೂಡ ಒಂದು ಹಕ್ಕಾಗಿದೆ. ಯಾರೂ ಕೂಡ ನ್ಯಾಯ ವಂಚಿತರಾಗದೇ ನ್ಯಾಯ ಪಡೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶ ರಾಜೇಶ್ವರಿ ಎನ್.ಹೆಗಡೆ ತಿಳಿಸಿದರು.

ನಗರದ ಆರ್.ಎಲ್. ಕಾನೂನು ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಮಟ್ಟದ ಲೋಕ ಅದಾಲತ್ ಜಾಗೃತಿ ಜಾಥಾ 2023-2024ರ ಉದ್ಘಾಟಿಸಿ ಮಾತನಾಡಿದರು.

ಈಗಲೂ ಕೂಡ ಗ್ರಾಮಾಂತರ ಪ್ರದೇಶಗಳಲ್ಲಿ ಮಾತ್ರವಲ್ಲದೆ ನಗರ ಪ್ರದೇಶಗಳಲ್ಲೂ ಜನರು ನ್ಯಾಯದಿಂದ ವಂಚಿತರಾಗಿದ್ದಾರೆ. ಈ ನಿಟ್ಟಿನಲ್ಲಿ ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರವು ನ್ಯಾಯಾಲಯದ ವ್ಯಾಜ್ಯಗಳು ಮಾತ್ರವಲ್ಲದೆ ಪೂರ್ವ ವ್ಯಾಜ್ಯಗಳನ್ನು ಬಗೆಹರಿಸಿಕೊಳ್ಳಲು ಲೋಕ್ ಅದಾಲತನ್ನು ನಡೆಸುತ್ತಿದೆ. ಇದರಲ್ಲಿ ನುರಿತ ವಕೀಲರಿಂದ ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥ ಮಾಡಿಕೊಳ್ಳಲು ಅವಕಾಶ ಇರುತ್ತದೆ ಎಂದರು.

ಲೋಕ್ ಅದಾಲತ್ತಿನಲ್ಲಿ ನಮ್ಮ ವ್ಯಾಜ್ಯಗಳನ್ನು ಇತ್ಯರ್ಥ ಮಾಡಿಕೊಳ್ಳುವುದರಿಂದ ಸಮಯದ ಉಳಿತಾಯ ಮಾತ್ರವಲ್ಲದೆ ಶುಲ್ಕ ಪಾವತಿ ಕೂಡಾ ಇರುವುದಿಲ್ಲ. ಒಂದು ವೇಳೆ ನ್ಯಾಯಾಲಯದಲ್ಲಿ ಶುಲ್ಕ ಪಾವತಿ ಮಾಡಿದ್ದರೂ ಅದನ್ನು ಮರು ಪಾವತಿ ಮಾಡಲು ಅವಕಾಶ ಇದೆ. ಕಕ್ಷಿದಾರರಲ್ಲಿ ಶತ್ರುತ್ವದ ಬದಲಿಗೆ ಉತ್ತಮ ಬಾಂಧವ್ಯ ಬೆಳೆಯಲು ಲೋಕ್ ಅದಾಲತ್ತು ಸಹಕಾರಿ ಆಗಲಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿದ್ದ ಹಿರಿಯ ಸಿವಿಲ್ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮಾ.ಕರೆಣ್ಣವರ್ ಮಾತನಾಡಿ, ನ್ಯಾಯಾಲಯಗಳಲ್ಲಿ ಪ್ರಕರಣ ವಿಲೇವಾರಿ ಮಾಡಲು ಅದರದ್ದೇ ಆದ ಹಲವಾರು ಕಾನೂನು, ಚೌಕಟ್ಟನ್ನು ನೀಡಲಾಗಿರುತ್ತದೆ. ಅದರಂತೆ ಹಲವು ಪ್ರಕ್ರಿಯೆ ನಡೆಸಬೇಕಾಗುತ್ತದೆ. ಈ ಕಾರಣದಿಂದಾಗಿ ಲೋಕ್ ಅದಾಲತ್ತಿನಲ್ಲಿ ರಾಜಿ ಸಂದಾನದ ಮೂಲಕ ಸತ್ಯಾಂಶ ತಿಳಿದು ಕೊಳ್ಳುವ ಮೂಲಕ ಅವರ ತಪ್ಪನ್ನು ಅವರಿಗೆ ಅರ್ಥ ಮಾಡಿಕೊಳ್ಳಲು ಅವಕಾಶ ನೀಡುತ್ತದೆ. ಈ ನಿಟ್ಟಿನಲ್ಲಿ ಹಲವಾರು ಪ್ರಕರಣಗಳನ್ನು ಬಗೆಹರಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರುಣ್ ಕುಮಾರ್ ಮಾತನಾಡಿ, ಸಂವಿಧಾನದ ಅಡಿಯಲ್ಲಿ ಬರುವ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗಗಳು ಕಾರ್ಯ ನಿರ್ವಹಿಸುತ್ತವೆ. ಆದರೆ, ಶಾಸಕಾಂಗ ವ್ಯವಸ್ಥೆ ಮೇಲೆ ವಿಶ್ವಾಸ ಕಳೆದು ಕೊಂಡಿದ್ದಾರೆ. ಇದಷ್ಟೆ ಅಲ್ಲದೇ ಕಾರ್ಯಾಂಗದ ಮೇಲೂ ಜನರು ನಂಬಿಕೆ ಕಳೆದು ಕೊಂಡಿದ್ದು, ಅಧಿಕಾರಿಗಳಿಂದ ಸರಿಯಾದ ಸ್ಪಂದನೆ ಸಿಗುತ್ತಿಲ್ಲ ಎನ್ನಲಾಗುತ್ತಿದೆ. ಈ ನಿಟ್ಟಿನಲ್ಲಿ ನ್ಯಾಯಾಂಗ ತನ್ನ ಜವಾಬ್ದಾರಿ ಮರೆಯದೆ ಕಾರ್ಯ ನಿರ್ವಹಿಸಬೇಕಾಗಿದೆ ಎಂದು ಹೇಳಿದರು. ಈ ವೇಳೆ ಆರ್.ಎಲ್.ಕಾನೂನು ಕಾಲೇಜಿನ ಪ್ರಾಚಾರ್ಯ ಡಾ.ಜಿ.ಎಸ್. ಯತೀಶ್, ಐಕ್ಯೂಎಸಿ ಸಹ ಸಂಚಾಲಕ ಬಿ.ಪಿ.ಬಸವನಗೌಡ, ಕಾರ್ಯಕ್ರಮದ ಸಂಚಾಲಕ ಟಿ. ವಿದ್ಯಾಧರ ವೇದವರ್ಮ, ಆರ್.ಭಾಗ್ಯಲಕ್ಷ್ಮಿ, ಡಾ.ಸೋಮಶೇಖರ್, ಪ್ರೊ.ಪ್ರದೀಪ್ ಇತರರು ಇದ್ದರು.

## ಫಾಸ್ಟ್ ನ್ಯೂಸ್

### ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

» ದಾವಣಗೆರೆ

ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಜುಲೈ 15 ಮತ್ತು 16 ರಂದು ಆಯೋಜಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

### ಚನ್ನಮ್ಮನಾಗತಿಯಲ್ಲಿ ಜು.15 ರಕ್ತದಾನ ಶಿಬಿರ

» ಪರಶುರಾಂಪುರ

ಸಮೀಪದ ಚನ್ನಮ್ಮನಾಗತಿಹಳ್ಳಿ ಗ್ರಮದಲ್ಲಿ ಸ್ಥಳೀಯ ಗ್ರಾಪಂ,ಪ್ರಾಥಮಿಕ ಅರೋಗ್ಯ ಕೇಂದ್ರ,ಐ.ಟಿ.ಸಿ.ಟಿ ಸಮುದಾಯ ಆರೋಗ್ಯ ಕೇಂದ್ರ,ಪರಶುರಾಂಪುರ ಹಾಗೂ ಭಗತ್ ಸಿಂಗ್ ಅಭಿಮಾನಿ ಬಳಗದ ಸಹಯೋಗದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನ ಹಮ್ಮಿಕೊಳ್ಳಲಾಗಿದೆ.ಗ್ರಾಮದ ಆರೋಗ್ಯ ಕೇಂದ್ರದ ಆವರಣದಲ್ಲಿ ಜು.15 ಸೋಮವಾರ ಬೆಳಗೆ 10 ಗಂಟೆಯಿಂದ ಸಂಜೆ 4 ಗಂಟೆಯ ವರಗೆ ಕಾರ್ಯಕ್ರಮವನ್ನ ಆಯೋಜನೆ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ 990069717,9447742 267,8105039215,948118221 ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಕ್ಕಳ ಪ್ರವೇಶಕ್ಕೆ ಅಹ್ವಾನ

» ದಾವಣಗೆರೆ

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ನಡೆಯುತ್ತಿರುವ ವಸತಿ ಶಾಲೆಗಳಿಗೆ 6 ನೇ ತರಗತಿಗೆ ಶೇ 10 ರಷ್ಟು ಮೀಸಲಿರಿಸಿ ವಿಶೇಷ ವರ್ಗಗಳ ಅಡಿಯಲ್ಲಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಸಫಾಯಿ ಕರ್ಮಚಾರಿ, ಗುರುತಿಸಲ್ಪಟ್ಟ ಮ್ಯಾನುಯಲ್ ಸ್ಕ್ಯಾವೆಂಜೆರ್‌ಗಳ ಮಕ್ಕಳು ಮತ್ತು ಮೊಮ್ಮಕ್ಕಳು, ಪೌರ ಕಾರ್ಮಿಕ, ಚಿತಾಗಾರದ ಕಾರ್ಮಿಕರ ಮಕ್ಕಳು, ಸ್ಮಶಾನ ಕಾರ್ಮಿಕರ ಮಕ್ಕಳು, ಬಾಲ ಕಾರ್ಮಿಕರು, ಜೀತ ವಿಮುಕ್ತ ಕಾರ್ಮಿಕರ ಮಕ್ಕಳು, ಗುರುತಿಸಿರುವ ಮಾಜಿ ದೇವದಾಸಿಯರ ಮಕ್ಕಳು,ಶೇ. 25 ಗಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು, ಹೆಚ್.ಐ.ವಿ ಗೆ ತುತ್ತಾದ ಪೋಷಕರ ಮಕ್ಕಳು, ಏಕ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳು, ಗುರುತಿಸಿರುವ ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮ, ಅತೀ ಸೂಕ್ಷ್ಮ ಸಮುದಾಯದ, ಸೈನಿಕರು ಮತ್ತು ಮಾಜಿ ಸೈನಿಕರು, ಸರ್ಕಾರಿ ಯೋಜನೆಗಳಿಂದ ಸ್ಥಳಾಂತರಗೊಂಡ ಪೋಷಕರ ಮಕ್ಕಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಆಶ್ರಮ ವಸತಿ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳು ಪ್ರವೇಶ ಪಡೆಯಬಹುದಾಗಿದೆ. ಜಿಲ್ಲೆಯಲ್ಲಿ 22 ವಸತಿ ಶಾಲೆಗಳಿದ್ದು ಈ ವಸತಿ ಶಾಲೆಗಳಿಗೆ ಆನ್‌ಲೈನ್ ಮೂಲಕ http://cetonline.karnataka.goc.in/kreis24d ಲಿಂಕ್ ಬಳಸಿ ಅರ್ಜಿ ಸಲ್ಲಿಸಬಹುದು. ವಿಶೇಷ ವರ್ಗದ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನಲ್ಲಿ 6ನೇ ತರಗತಿಯಲ್ಲಿ ಓದುತ್ತಿದ್ದಲ್ಲಿ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ದೃಢೀಕರಿಸಿ ಕಚೇರಿಗೆ ಅಥವಾ ಹತ್ತಿರದ ವಸತಿ ಶಾಲೆ(ಪ.ಜಾತಿ,ಪ.ಪಂ,ಹಿ.ವರ್ಗ) ಪ್ರಾಂಶುಪಾಲರನ್ನು ಸಂಪರ್ಕಿಸಿ ಪ್ರವೇಶ ಪಡೆಯಬಹುದೆಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ನಾಗರಾಜ ತಿಳಿಸಿದ್ದಾರೆ.

### 12ರಂದು ಪ್ರತಿಭೋತ್ಸವ ಸಮಾರಂಭ

» ಚಿತ್ರದುರ್ಗ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ದಾವಣಗೆರೆ ವಿಶ್ವವಿದ್ಯಾನಿಲಯ, ಚಿತ್ರದುರ್ಗ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಐ.ಕ್ಯೂ.ಎ.ಸಿ ಸಹಯೋಗದಲ್ಲಿ ಇದೇ ಜುಲೈ 12ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ತ.ರಾ.ಸು ರಂಗಮಂದಿರದಲ್ಲಿ ಪ್ರತಿಭೋತ್ಸವ ಸಮಾರಂಭ ಆಯೋಜಿಲಾಗಿದೆ. ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅವರು ಮಹಿಳಾ ಸಿರಿ ವಾರ್ಷಿಕ ಸಂಚಿಕೆ ಬಿಡುಗಡೆ ಹಾಗೂ ಬಹುಮಾನ ವಿತರಣೆ ಮಾಡುವರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಮಾರೋಪ ಭಾಷಣ ಮಾಡುವರು. ಪ್ರಾಂಶುಪಾಲ ಡಾ.ಹೆಚ್.ಗುಡ್ಡದೇಶ್ವರಪ್ಪ ಅಧ್ಯಕ್ಷತೆ ವಹಿಸುವರು. ಮಹಿಳಾ ಸಿರಿ ವಾರ್ಷಿಕ ಸಂಚಿಕೆ ಸಂಪಾದಕ ಬಿ. ಮಂಜುನಾಥ್, ವಾಣಿಜ್ಯ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಸಿ.ಚನ್ನಕೇಶವ, ಸಾಂಸ್ಕೃತಿಕ ಸಮಿತಿ ಸಂಚಾಲಕ ಡಾ.ಡಿ.ಓ.ಸಿದ್ದಪ್ಪ, ಅಧ್ಯಾಪಕರ ಸಂಘದ ಕಾರ್ಯದರ್ಶಿ ಡಾ.ಪಿ.ಎನ್.ಮಧುಸೂದನ್, ಐ.ಕ್ಯೂ.ಎ.ಸಿ ಸಂಚಾಲಕ ಬಿ.ಹೆಚ್.ಕುಮಾರಸ್ವಾಮಿ, ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಾಧಿಕಾರಿ ಎಂ.ಗಿರೀಶ್, ಕ್ರೀಡಾ ಸಮಿತಿ ಸಂಚಾಲಕ ಆರ್.ಶಿವಪ್ರಸಾದ್, ಪತ್ರಾಂಕಿತ ವ್ಯವಸ್ಥಾಪಕ ಆರ್.ವೆಂಕಟೇಶ್ ಉಪಸ್ಥಿತರಿರುವರು. ಬಿ.ಕಾಂ ಉನ್ನತ ಶ್ರೇಣಿ ಪಡೆದ ರುಖಾಯಾ ತಾಜೀಮ್, ಬಿ.ಎ.ಉನ್ನತ ಶ್ರೇಣಿ ಪಡೆದ ಎನ್.ರಕ್ಷಿತ ಅವರಿಗೆ ಸನ್ಮಾನಿಸಲಾಗುವುದು ಎಂದು ಪ್ರಾಂಶುಪಾಲ ಡಾ.ಹೆಚ್.ಗುಡ್ಡದೇಶ್ವರಪ್ಪ ತಿಳಿಸಿದ್ದಾರೆ.

ವಿಶ್ವ ಜನಸಂಖ್ಯಾ ದಿನ ಕಾರ್ಯಕ್ರಮದಲ್ಲಿ ಸಂಸದ ಗೋವಿಂದ ಎಂ.ಕಾರಜೋಳ

# ಜನಸಂಖ್ಯೆ ಹೆಚ್ಚಳ: ಪರಿಸರ ಮೇಲೆ ದುಷ್ಪರಿಣಾಮ





» ಚಿತ್ರದುರ್ಗ

ಜನಸಂಖ್ಯೆ ಹೆಚ್ಚಳದಿಂದಾಗಿ ಪರಿಸರ ಮೇಲೆ ಹೆಚ್ಚಿನ ದುಷ್ಪಾರಿಣಾಮ ಬೀರಿದೆ ಎಂದು ಚಿತ್ರದುರ್ಗ ಲೋಕಸಭಾ ಸದಸ್ಯರಾದ ಗೋವಿಂದ ಎಂ.ಕಾರಜೋಳ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಜನಸಂಖ್ಯಾ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

1987 ಜುಲೈ 11 ರಿಂದ ಇಡೀ ಪ್ರಪಂಚದಾದ್ಯಂತ ವಿಶ್ವ ಜನಸಂಖ್ಯೆ ದಿನಾಚರಣೆ ಆಚರಿಸಲಾಗುತ್ತಿದೆ. ಇಡೀ ವಿಶ್ವದಲ್ಲಿಯೇ ಜನಸಂಖ್ಯೆಯಲ್ಲಿ ಭಾರತ ಪ್ರಥಮ ಸ್ಥಾನದಲ್ಲಿದೆ. ಜನಸಂಖ್ಯೆ ಸ್ಫೋಟದಿಂದ ಆಗುವ ಸಮಸ್ಯೆಗಳು ಬಹಳ ದೊಡ್ಡ ಪ್ರಮಾಣದಲ್ಲಿದೆ ಎಂದರು.

ಮನುಷ್ಯನ ಬೇಕು ಬೇಡಿಕೆಗಳನ್ನು ಈಡೇರಿಸಲುವ ಸಲುವಾಗಿ ನಾವು ಅರಣ್ಯವನ್ನು ನಾಶಪಡಿಸಲಾಗುತ್ತಿದೆ. ಕೆರೆ ಕಟ್ಟೆಗಳನ್ನು ಒತ್ತು ಮಾಡಲಾಗುತ್ತಿದೆ. ಭೂಮಿಯ ಮೇಲ್ಭಾಗದ ನೀರನ್ನು ಕಲುಷಿತಗೊಳಿಸಲಾಗುತ್ತಿದೆ. ಶುದ್ಧ ಕುಡಿಯುವ ನೀರು ಸಿಗದೇ ಇರುವುದರಿಂದ ಪ್ರಪಂಚದಲ್ಲಿ ರೋಗರುಜಿನಗಳ ಸಂಖ್ಯೆ ಏರಿಕೆಯಾಗುತ್ತಿದೆ. ರೋಗ ಹರಡಲು ಮೂಲ ಕಾರಣವೇ ನೀರು. ಕುಡಿಯಲು ಶುದ್ಧವಾದ ನೀರು ಕೊಡದೇ ಇರುವುದರಿಂದ, ಮನುಷ್ಯದ ದುರಾಸೆಯಿಂದ ಭೂಮಿಯ ಮೇಲ್ಭಾಗದ ನೀರನ್ನು ಕಲುಷಿತಗೊಳಿಸಿದ ಪರಿಣಾಮ, ಅವಶ್ಯಕತೆಗಿಂತ ಹೆಚ್ಚಿನ ಪ್ರಮಾಣದಲ್ಲಿ ನೀರು ಬಳಕೆ ಮಾಡುವುದರಿಂದ ಜನರಿಗೆ ಶುದ್ಧವಾದನೀರುಕೊಡಲುಸಾಧ್ಯವಾಗುತ್ತಿಲ್ಲ. ಹಾಗಾಗಿ ನಾವು ಜಲಸಂಗ್ರಹಾರಗಳನ್ನು ಸ್ವಚ್ಛವಾಗಿ ಹಾಗೂ ಸುರಕ್ಷಿತವಾಗಿಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಅಭಿಪ್ರಾಯವ್ಯಕ್ತಪಡಿಸಿದರು.

ಅಂಕಿ ಅಂಶಗಳ ಮಾಹಿತಿ ಪ್ರಕಾರ ದೇಶದಲ್ಲಿ ಪ್ರತಿ ನಿಮಿಷಕ್ಕೆ 46 ಮಕ್ಕಳು ಜನಿಸುತ್ತಾರೆ. ಒಂದು ದಿನಕ್ಕೆ 67 ಸಾವಿರ ಮಕ್ಕಳು ಜನಿಸುತ್ತಾರೆ. ಜನಸಂಖ್ಯೆ ಸ್ಫೋಟದಿಂದಾಗಿ ಶಿಕ್ಷಣದ ಸಮಸ್ಯೆ, ಬಡತನ ಹೆಚ್ಚಳ, ವಸತಿ, ಸಾರಿಗೆ ಸಮಸ್ಯೆ ಆಗಲಿದೆ. ಹಾಗಾಗಿ ಜನಸಂಖ್ಯೆ ನಿಯಂತ್ರಣ ಅವಶ್ಯಕ ಹಾಗೂ ಅಗತ್ಯವಾಗಿದೆ. ಜನಸಂಖ್ಯೆ ದಿನಾಚರಣೆ ಕೇವಲ ಆಶಾ, ಅಂಗನವಾಡಿ ಕಾರ್ಯಕರ್ತೆಯರು, ವೈದ್ಯಕೀಯ, ಅರೆ ವೈದ್ಯಕೀಯ ಕಾಲೇಜು ವಿದ್ಯಾರ್ಥಿಗಳಿಗೆ ಮಾತ್ರ ಸೀಮಿತವಾಗದೇ ಸಾರ್ವಜನಿಕ ಸಹಭಾಗಿತ್ವದಲ್ಲಿ ಗ್ರಾಮೀಣ ಪ್ರದೇಶದಲ್ಲಿ ಜಾಥಾ ಕಾರ್ಯಕ್ರಮ ನಡೆಸಿ, ಅರಿವು ಮೂಡಿಸಬೇಕು ಎಂದು ಹೇಳಿದರು.

ಅಪರಜಿಲ್ಲಾಧಿಕಾರಿಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಜನಸಂಖ್ಯೆ ವೃದ್ಧಿಯಾಗುತ್ತಲೇ ಇದೆ. ಆದರೆ ಭೂಮಿ ಇದ್ದಷ್ಟೇ ಇದೆ. ಜನಸಂಖ್ಯಾ ಹೆಚ್ಚಳದಿಂದ ಮೂಲಭೂತ ಸೌಕರ್ಯಗಳಿಗೆ ತೊಂದರೆಯಾಗುವುದಲ್ಲದೇ, ಶೈಕ್ಷಣಿಕವಾಗಿ, ಆರ್ಥಿಕವಾಗಿ ಮುಖ್ಯವಾಗಿ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಬೀರುತ್ತಿವೆ. ಜನಸಂಖ್ಯೆಯನ್ನು ನಿರ್ಮೂಲನೆ ಮಾಡಲು ಸಾಧ್ಯವಿಲ್ಲ, ಆದರೆ ನಿಯಂತ್ರಿಸಬಹುದು. ಈ ಹಿನ್ನಲೆಯಲ್ಲಿ ಸರ್ಕಾರವು ಕುಟುಂಬ ಕಲ್ಯಾಣ ಯೋಜನೆಗಳಂತಹ ಹಲವಾರು ಯೋಜನೆಗಳನ್ನು ರೂಪಿಸಿದೆ. ಈ ಯೋಜನೆಗಳ ಮೂಲಕ ಜನಸಂಖ್ಯೆಯನ್ನು ನಿಯಂತ್ರಿಸಬಹುದಾಗಿದೆ. ಇದೆಲ್ಲದಕ್ಕೂ ಶೈಕ್ಷಣಿಕ ಕೊರತೆ ಮುಖ್ಯ ಕಾರಣ. ಆದ್ದರಿಂದ ಬಹುಮುಖ್ಯವಾಗಿ ಹೆಣ್ಣು ಮಕ್ಕಳಿಗೆ ಉನ್ನತ ಶಿಕ್ಷಣ ನೀಡಬೇಕು. ಈ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮೂಡಿಸಿದರೆ ಜನಸಂಖ್ಯೆಯನ್ನು ಸುಧಾರಿಸಬಹುದು ಎಂದು ಹೇಳಿದರು.

ಜಿಲ್ಲೆಯ ಮೊಳಕಾಲ್ಮೂರು ಹಾಗೂ ಚಳ್ಳಕೆರೆ ತಾಲ್ಲೂಕುಗಳಲ್ಲಿ ಬಾಲ ಗರ್ಭಿಣಿಯರು ಕಂಡು ಬರುತ್ತಿರುವುದು ಅಮಾನವೀಯವಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಆಶಾ ಕಾರ್ಯಕರ್ತೆಯರು ಈ ಬಗ್ಗೆ ಗಮನಹರಿಸಬೇಕು. ಜನಸಂಖ್ಯೆಯು ನಿಯಂತ್ರಣದಲ್ಲಿದ್ದಾಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ. ಜನಸಂಖ್ಯಾ ನಿಯಂತ್ರಣದ ಕುರಿತು ಅರಿವು ಮೂಡಿಸಲು ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ವಿಶ್ವ ಜನಸಂಖ್ಯೆ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಉತ್ತಮ ಹೆರಿಗೆ ವಾರ್ಡ್ ಮತ್ತು ಉತ್ತಮ ಹೆರಿಗೆ ಶಸ್ತ್ರಚಿಕಿತ್ಸೆ ಕೊಠಡಿ ನಿರ್ವಹಣೆಗಾಗಿ ಡಾ.ರವೀಂದ್ರ ಹಾಗೂ ಡಾ.ಪವಿತ್ರ ಲಕ್ಷ್ಯಾ ಪ್ರಶಸ್ತಿ ನೀಡಲಾಯಿತು. ಕುಟುಂಬ ಯೋಜನೆ ಕಾರ್ಯಕ್ರಮದಲ್ಲಿ ಶಸ್ತ್ರಚಿಕಿತ್ಸೆಗಾಗಿ ಡಾ.ಸಾಲಿಮಂಜಪ್ಪ, ಡಾ.ಅಭಿನವ್ ಅವರಿಗೂ ಪ್ರಶಸ್ತಿ ನೀಡಲಾಯಿತು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸತೀಶ್ ರೆಡ್ಡಿ, ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ಜಿಲ್ಲಾ ಕುಟುಂಬ ಯೋಜನಾಧಿಕಾರಿ ಡಾ.ರೇಖಾ, ಜಿಲ್ಲಾಆಶ್ರಿತರೋಗಗಳನಿಯಂತ್ರಣಾಧಿಕಾರಿ ಡಾ.ಕಾಶೀ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್, ಜಿಲ್ಲಾ ಮಾನಸಿಕ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ನಾಗರಾಜ್, ಜಿಲ್ಲಾ ಆಸ್ಪತ್ರೆಯ ಹೆರಿಗೆ ತಜ್ಞರಾದ ಡಾ.ಪವಿತ್ರ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್, ಉಪ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಸೇರಿದಂತೆ ತಾಲ್ಲೂಕು ಆರೋಗ್ಯಾಧಿಕಾರಿಗಳು, ಆರೋಗ್ಯ ಇಲಾಖೆ ಸಿಬ್ಬಂದಿ, ಕಾಲೇಜು ವಿದ್ಯಾರ್ಥಿಗಳು ಇದ್ದರು.

### ಮಳೆ ನೀರು ಕೊಯ್ಲು ಕಡ್ಡಾಯಗೊಳಿಸಿ

ಮಳೆ ನೀರು ಕೊಯ್ಲು ಪ್ರತಿಯೊಂದು ಮನೆಯಲ್ಲಿ ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು ಎಂದು ಸಂಸದ ಗೋವಿಂದ ಎಂ ಕಾರಜೋಳ ಸಲಹೆ ನೀಡಿದರು. ಇನ್ನೂ ಮುಂದೆ ಮನೆ ನಿರ್ಮಾಣಕ್ಕೆ ಅನುಮತಿ ನೀಡುವ ಮೊದಲು ಕಡ್ಡಾಯವಾಗಿ ಮಳೆ ನೀರು ಕೊಯ್ಲು ಅಳವಡಿಸಿಕೊಂಡಿದ್ದಾರೆಯೇ ಎಂಬುದನ್ನು ಪರಿಶೀಲಿಸಿ, ಮನೆ ನಿರ್ಮಾಣಕ್ಕೆ ಅನುಮತಿ ನೀಡಬೇಕು. ಮಳೆ ನೀರು ಸ್ವಚ್ಛ ಹಾಗೂ ಶುದ್ಧವಾಗಿದ್ದು, ಕುಡಿಯಲು ಬಹಳ ಯೋಗ್ಯವಾದ ನೀರು. ಭೂಮಿ ಮೇಲ್ಭಾಗದಲ್ಲಿ ನೀರು ಹಿಡಿದಿಡಲು ನಾವು ಪ್ರಯತ್ನ ಮಾಡಬೇಕು ಎಂದು ಹೇಳಿದರು.

### ಜಾಥಾ ಕಾರ್ಯಕ್ರಮ

ಜನಸಂಖ್ಯಾ ದಿನಾಚರಣೆ ಅಂಗವಾಗಿ ನಗರ ಜಿಲ್ಲಾಸ್ಪತ್ರೆಯ ಆವರಣದಲ್ಲಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ರವೀಂದ್ರ ಅವರು ಜಾಥಾಕ್ಕೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ಜನಸಂಖ್ಯಾ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಮನೆಗೊಂದು ಮಗು ಮನೆತುಂಬಾ ನಗು, ನಾವಿಬ್ಬರು ನಮಗೊಬ್ಬರು, ಜನಸಂಖ್ಯಾ ನಿಯಂತ್ರಣ ನಮ್ಮೆಲ್ಲರ ಜವಾಬ್ದಾರಿ, ಚಿಕ್ಕ ಕುಟುಂಬ ಚೊಕ್ಕ ಸಂಸಾರ, ಕುಟುಂಬ ಯೋಜನೆ ಅನುಸರಿಸಿ ಜನಸಂಖ್ಯೆ ನಿಯಂತ್ರಿಸಿ ಎಂಬ ಘೋಷಣೆಗಳನ್ನು ಕೂಗಿ ಜನಸಂಖ್ಯಾ ನಿಯಂತ್ರಣದ ಬಗ್ಗೆ ಜಾಗೃತಿ ಮೂಡಿಸಲಾಯಿತು. ಜಿಲ್ಲಾ ಆಸ್ಪತ್ರೆ ಆವರಣದಿಂದ ಪ್ರಾರಂಭವಾದ ಜಾಥಾವು ಜೋಗಿಮಟ್ಟಿ ರಸ್ತೆ, ಮದಕರಿ ವೃತ್ತದ ಮೂಲಕ ತ.ರಾ.ಸು ರಂಗಮಂದಿರವರೆಗೂ ನಡೆಯಿತು.

# ವಿಷ್ಣುಸಹಸ್ರನಾಮ ಪಠಣದಿಂದ ಬದುಕಿನಲ್ಲಿ ನೆಮ್ಮದಿ

» ಚಳ್ಳಕೆರೆ



ಕಳೆದ ನೂರಾರು ವರ್ಷಗಳಿಂದ ನಮ್ಮೆಲ್ಲರ ಬದುಕಿನಲ್ಲಿ ಹೆಚ್ಚು ಆತ್ಮಸಂತೋಷವನ್ನುಂಟು ಮಾಡುವ ಬದುಕಿಗೆ ನೆಮ್ಮದಿಯ ಜೊತೆಗೆ ಸಾರ್ಥಕತೆಯನ್ನುಸಹನೀಡುವವಿಷ್ಣುಸಹಸ್ರನಾಮ ಪಠಣೆ ಉತ್ತಮ ಕಾರ್ಯವೆಂದು ನರಹರಿ ಸದ್ಗುರುಪೀಠದ ವೈ.ರಾಜಾರಾಮ್‌ಸ್ವಾಮಿ ತಿಳಿಸಿದರು.

ಅವರು, ಗುರುವಾರ ನಗರದ ವಾಸವಿ ದೇವಸ್ಥಾನದ ಗೀತಾಮಂದಿರದಲ್ಲಿ ವಾಸವಿ ವನಿತಾ ಸಂಘ ಹಮ್ಮಿಕೊಂಡಿದ್ದ ವಿಷ್ಣುಸಹಸ್ರನಾಮದ ಅರ್ಥವಿವೇಚನೆ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು. ವಾಸವಿವನಿತಾ ಸಂಘ ಏಳು ದಿನಗಳ ಸಪ್ತಾಹ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ವಿಷ್ಣುಸಹಸ್ರನಾಮದ ಬಗ್ಗೆ ಹಲವಾರು ವಿಚಾರಗಳನ್ನು ರಾಜರಾಮ್ ಸ್ವಾಮೀಜಿಯವರು ತಿಳಿಸಿ ಎಲ್ಲ ಸದ್ಭಕ್ತರು ಉತ್ತಮ ಸನ್ಮಾರ್ಗದಲ್ಲಿ ನಡೆಯುವ ಪ್ರೇರಣಾ ಶಕ್ತಿಯನ್ನು ವಿಷ್ಣುಸಹಸ್ರನಾಮದಿಂದ ಪಡೆಯಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಶಾರದಾಶ್ರಮದ ಮಾತಾಜಿ ತ್ಯಾಗಮಯಿ, ವಿಷ್ಣುನಾಮದ ಒಂದೊಂದು ಪದದಲ್ಲೂ ವಿಶೇಷ ಅರ್ಥವಿದೆ. ಪ್ರತಿಯೊಬ್ಬ ವ್ಯಕ್ತಿಯೂ ವಿಷ್ಣುನಾಮ ಅರಿತರೆ ಜ್ಞಾನವಂತನಾಗಿವಿವೇಕವಂತನಾಗಿಬದುಕುತ್ತಾನೆ. ಸಂಸ್ಕೃತಿ ಮತ್ತು ಸಂಸ್ಕಾರವನ್ನು ರೂಢಿಸಿಕೊಂಡು ಮುನ್ನಡೆಯುತ್ತಾನೆ. ವಿಷ್ಣುಸಹಸ್ರನಾಮದಲ್ಲಿ ಎಲ್ಲರನ್ನೂ ಬದಲಾಯಿಸುವ ಮೌಲ್ಯವಿದೆ ಎಂದರು.

ಕಲ್ಪನಾ, ನಳಿನ, ನಾಗವೇಣಿ, ವಾಸವಿ, ಗೀತ, ಉಷಾ, ಪಂಕಜ, ಡಾ.ಭೂಮಿಕಾ, ವನಜಾಕ್ಷಿ, ಸಂಧ್ಯ, ವಿದ್ಯಾ, ವೀಣಾ, ಮಾಕಂಶ್ರೀನಿವಾಸಲು, ಮಾಣಿಕ್ಯ, ಸತ್ಯನಾರಾಯಣ, ಯತೀಶ್ ಮುಂತಾದವರು ಪಾಲ್ಗೊಂಡಿದ್ದರು.

### ಪತ್ರಿಕಾ ದಿನಾಚರಣೆ ನಾಳೆ

ಚಿತ್ರದುರ್ಗ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಮತ್ತು ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘ ಇವರುಗಳ ಸಂಯುಕ್ತಾಶ್ರಯದಲ್ಲಿ ಜು. 13 ರ ಶನಿವಾರ ಬೆಳಿಗ್ಗೆ 10.30ಕ್ಕೆ ನಗರದ ಜಿ.ಪಂ. ಮುಖ್ಯ ಸಭಾಂಗಣದಲ್ಲಿ ಪತ್ರಿಕಾ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಮಾರಂಭವನ್ನು ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಉದ್ಘಾಟಿಸಿದ್ದು, ಶಾಸಕರಾದ ಕೆ.ಸಿ. ವೀರೇಂದ್ರರವರು ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಸಂಸದರಾದ ಗೋವಿಂದ ಎಂ. ಕಾರಜೋಳ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷರಾದ ಕೆ. ಅನ್ವರ್ ಭಾಷಾ, ಶಾಸಕರು, ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷರಾದ ಬಿ.ಜಿ. ಗೋವಿಂದಪ್ಪ, ಶಾಸಕರು, ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಟಿ. ರಘುಮೂರ್ತಿ, ಶಾಸಕರಾದ ಎನ್.ವೈ. ಗೋಪಾಲಕೃಷ್ಣ, ಡಾ. ಎಂ. ಚಂದ್ರಪ್ಪ ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಡಿ.ಟಿ. ಶ್ರೀನಿವಾಸ್, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷರಾದ ಡಾ. ಬಿ. ಯೋಗೇಶ್ ಬಾಬು, ಆದಿಜಾಂಭವ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್. ಮಂಜುನಾಥ, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷರಾದ ಶ್ರೀಮತಿ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಎಂ.ಕೆ.ತಾಜ್‌ಪೀರ್ ಭಾಗವಹಿಸಲಿದ್ದಾರೆ.

## ಪ್ರಮುಖ ಸುದ್ದಿ

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# ಜಿಲ್ಲೆಯಲ್ಲಿ ಡೆಂಗೀ ನಿಯಂತ್ರಣ, ನಿರ್ಮೂಲನೆಗೆ ಕ್ರಮವಹಿಸಿ

» ಚಿತ್ರದುರ್ಗ



ಜಿಲ್ಲೆಯಲ್ಲಿ ಡೆಂಗೀ ನಿಯಂತ್ರಣ ಹಾಗೂ ನಿರ್ಮೂಲನೆಗೆ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಡೆಂಗಿ ನಿಯಂತ್ರಣ ಹಾಗೂ ಮುಂಜಾಗ್ರತಾ ಕ್ರಮಗಳ ಕುರಿತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಹಮ್ಮಿಕೊಂಡಿದ್ದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಡೆಂಗೀಯನ್ನು ಹತೋಟಿಯಲ್ಲಿಟ್ಟುಕೊಂಡು, ಯಾವುದೇ ಕಾರಣಕ್ಕೂ ಡೆಂಗೀಯಿಂದ ಸಾವು ಸಂಭವಿಸಬಾರದು. ಹಾಗಾಗಿ ಡೆಂಗೀ ನಿಯಂತ್ರಣಕ್ಕೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು, ಅಧಿಕಾರಿಗಳು ಯುದ್ಧೋಪಾದಿಯಲ್ಲಿ ಕಾರ್ಯನಿರ್ವಹಿಸಬೇಕು ಎಂದು ತಾಕೀತು ಮಾಡಿದರು.

15 ದಿನದೊಳಗೆ ಲಾರ್ವಾ ಸಮೀಕ್ಷೆ ಪೂರ್ಣಗೊಳಿಸಿ: ಜಿಲ್ಲೆಯ ಗ್ರಾಮೀಣ ಮತ್ತು ನಗರದ ಪ್ರದೇಶಗಳಲ್ಲಿ ಸ್ವಯಂ ಸೇವಕರು, ಆಶಾ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ ಸಿಬ್ಬಂದಿ ಸೇರಿ 15 ದಿನದೊಳಗೆ ಲಾರ್ವಾ ಸಮೀಕ್ಷೆ ಪೂರ್ಣಗೊಳಿಸಬೇಕು. ಲಾರ್ವಾ ಸಮೀಕ್ಷೆ ಜೊತೆಗೆ ಡೆಂಗೀ ಕುರಿತು ಮಾಹಿತಿ ಶಿಕ್ಷಣ ನೀಡುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು.

ವಾರಕ್ಕೆ ಒಂದು ದಿನ ಪ್ರತಿ ಶುಕ್ರವಾರ "ಈಡಿಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶ ಮಾಡುವ ದಿನ" ನಡೆಯುತ್ತಿದ್ದು, ಮಳೆಗಾಲದ ಹಿನ್ನಲೆಯಲ್ಲಿ ಪ್ರತಿ ಶುಕ್ರವಾರದ ಜತೆಗೆ ಪ್ರತಿ ಮಂಗಳವಾರವೂ ಲಾರ್ವಾ ಸರ್ವೆ ಕಾರ್ಯ ಮಾಡಬೇಕು. ಜಿಲ್ಲೆಯಲ್ಲಿ ಡೆಂಗೀ ಹಾಟ್‌ಸ್ಪಾಟ್‌ಗಳನ್ನು ಗುರುತಿಸಬೇಕು. ಹಾಟ್‌ಸ್ಪಾಟ್‌ಗಳ್ಲಲಿ 100 ಮೀಟರ್ ಸುತ್ತ ಲಾರ್ವಾ ಸಮೀಕ್ಷೆ ನಡೆಸಬೇಕು. ಹಾಟ್‌ಸ್ಪಾಟ್‌ಗಳಲ್ಲಿ ಪರಿಣಾಮಕಾರಿಯಾಗಿ ಫಾಗಿಂಗ್ ಕಾರ್ಯ ನಡೆಯಬೇಕು. ಇದರಿಂದ ಡೆಂಗಿ ನಿಯಂತ್ರಿಸಲು ಸಾಧ್ಯವಾಗಲಿದೆ ಎಂದರು.

ಸಾರ್ವಜನಿಕರಿಗೆ ಅರಿವು ಮೂಡಿಸಿ: ಡೆಂಗೀ ನಿಯಂತ್ರಣದಲ್ಲಿ ಸಾರ್ವಜನಿಕರ ಸಹಭಾಗಿತ್ವ ಅಗತ್ಯವಾಗಿದ್ದು, ಡೆಂಗೀ ಕುರಿತು ಸಾರ್ವಜನಿಕರಿಗೆ ಹೆಚ್ಚಿನ ಅರಿವು ಮೂಡಿಸಬೇಕು. ಡೆಂಗೀ ನಿಯಂತ್ರಣ ಕುರಿತು ನಗರ ಸ್ಥಳೀಯ ಸಂಸ್ಥೆಗಳ ಕಸದ ವಾಹನಗಳಲ್ಲಿ ಆಡಿಯೋ ಜಿಂಗಲ್ಸ್ ಹಾಗೂ ಆಟೋ ಪ್ರಚಾರದ ಮೂಲಕ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಮೂರು ದಿನಕೊಮ್ಮೆ ಡಂಗೂರ ಸಾರಿಸಿ, ಜನರಿಗೆ ಅರಿವು ಮೂಡಿಸಬೇಕು. ಶಾಲೆಗಳಲ್ಲಿ ಪ್ರಾರ್ಥನಾ ಸಮಯದಲ್ಲಿ ಐದು ನಿಮಿಷಗಳ ಕಾಲ ಡೆಂಗೀ ಕುರಿತು ಜಾಗೃತಿ ಮೂಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದರು.

ಡೆಂಗೀ ಟೆಸ್ಟ್ ಹೆಚ್ಚಳ ಮಾಡಬೇಕು. ಇದರ ಆಧಾರದ ಮೇಲೆ ಲಾರ್ವಾ ನಾಶ ಮಾಡಲು ಯೋಜನೆ ರೂಪಿಸಿಕೊಳ್ಳಬೇಕು. ಡೆಂಗೀ ಚಿಕಿತ್ಸೆಗೆ ಅಗತ್ಯವಾಗಿ ಬೇಕಾಗಿರುವ ಎಲ್ಲ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಕೆ.ತಿಮ್ಮಪ್ಪ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ನಗರಾಭಿವೃದ್ಧಿ ಕೋಶದಯೋಜನಾನಿರ್ದೇಶಕಮಹೇಂದ್ರ ಕುಮಾರ್, ಆರೋಗ್ಯ ಇಲಾಖೆಯ ಡಾ.ಕಾಶೀ, ಡಾ.ಚಂದ್ರಶೇಖರ್ ಕಂಬಾಳಿ ಮಠ್, ಡಾ.ಅಭಿನವ್, ಡಾ.ರೇಖಾ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಚಿತ್ರದುರ್ಗ–ಚಳ್ಳಕೆರೆ–ಪಾವಗಡ ರಸ್ತೆ: ಹೆದ್ದಾರಿಯಾಗಿ ಮೇಲ್ದರ್ಜೆಗೆ ಏರಿಸಲು ಕೇಂದ್ರಕ್ಕೆ ಪ್ರಸ್ತಾವನೆ; ಸಂಸದ

» ಚಿತ್ರದುರ್ಗ

ಚಿತ್ರದುರ್ಗ–ಚಳ್ಳಕೆರೆ–ಪಾವಗಡ ಮಧ್ಯದ 120 ಕಿ.ಮೀ. ಉದ್ದದ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೆ ಏರಿಸಲು ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು. ಈ ರಸ್ತೆ ಅಭಿವೃದ್ಧಿಯಿಂದ ಆಂಧ್ರಪ್ರದೇಶ ಹಾಗೂ ಕರ್ನಾಟಕದ ನಡುವೆ ಸಂಪರ್ಕ ವೃದ್ಧಿಸಲಿದೆ. ಕೇಂದ್ರ ಸರ್ಕಾರದಿಂದ ಈ ಯೋಜನೆಗೆ ಅನುಮೋದನೆ ಪಡೆಯಲು ಪ್ರಾಮಾಣಿಕ ಪ್ರಯತ್ನ ನಡೆಸಲಾಗುವುದು ಎಂದು ಸಂಸದ ಗೋವಿಂದ ಎಂ ಕಾರಜೋಳ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ರಾಷ್ಟ್ರೀಯ ಹೆದ್ದಾರಿ ವಿಭಾಗ ಹಾಗೂ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದರು.



ಚಳ್ಳಕೆರೆ ತಾಲ್ಲೂಕಿನ 8000 ಎಕರೆ ಪ್ರದೇಶದಲ್ಲಿ ಐ.ಎಸ್.ಎಸ್.ಸಿ, ಇಸ್ರೋ, ಡಿ.ಆರ್.ಡಿ.ಓ ಸಂಸ್ಥೆಗಳ ಸ್ಥಾಪನೆಯಿಂದ ಚಳ್ಳಕೆರೆ ದೇಶದ ಪ್ರಮುಖ ನಗರವಾಗಿ ಮುನ್ನೆಲೆಗೆ ಬಂದಿದೆ. ಚಳ್ಳಕೆರೆ ನಗರ ವ್ಯಾಪ್ತಿಯ ರಸ್ತೆಗಳು ಸರಿಯಿಲ್ಲ. ಈ ರಸ್ತೆಗಳನ್ನು ರಾಜ್ಯ ಹಾಗೂ ಕೇಂದ್ರ ಸರ್ಕಾರವು ಅಭಿವೃದ್ಧಿ ಪಡಿಸುತ್ತಿಲ್ಲ. ಆದ್ದರಿಂದ ಚಳ್ಳಕೆರೆ ನಗರ ಪ್ರದೇಶದ 5.7 ಕಿ.ಮೀ. ರಸ್ತೆಯನ್ನು ರೂ.50 ಕೋಟಿ ವೆಚ್ಚದಲ್ಲಿ ಒಂದು ಬಾರಿಗೆ ಅಭಿವೃದ್ಧಿ ಪಡಿಸಲು ಭಾರತ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಮಂಜೂರಾತಿ ಪಡೆದುಕೊಳ್ಳಲಾಗುವುದು ಎಂದು ಸಂಸದ ಗೋವಿಂದ ಎಂ ಕಾರಜೋಳ ಭರವಸೆ ನೀಡಿದರು.

**ಬಿ.ಜಿ.ಕೆರೆ ಹೆದ್ದಾರಿ:** ರೂ. 1.48 ಕೋಟಿ ವೆಚ್ಚದ ಫುಟ್ ಓವರ್ ಬ್ರಿಡ್ಜ್ ನಿರ್ಮಾಣ

ಮೊಳಕಾಲ್ಮೂರು ತಾಲ್ಲೂಕು ಬಿ.ಜಿ.ಕೆರೆ ಬಳಿಯ ಹೆದ್ದಾರಿ ಕಾಮಗಾರಿಯಿಂದ ಬಿ.ಜಿ.ಕೆರೆ ಗ್ರಾಮ ಎರೆಡು ಸೀಳಾಗಿ ಓಳಾಗಿದ್ದು, ಪ್ರತಿನಿತ್ಯ ಜನರು, ಶಾಲಾ ಮಕ್ಕಳು ಓಡಾಟ ಮಾಡಲು ತೊಂದರೆಯಾಗಿರುವ ಕುರಿತು ಪತ್ರಿಕೆಗಳಲ್ಲಿ ವರದಿ ಪ್ರಕಟವಾಗಿವೆ. ಸಮಸ್ಯೆ ನಿವಾರಣೆಗಾಗಿ ರೂ. 1.48 ಕೋಟಿ ವೆಚ್ಚದ ಫುಟ್ ಓವರ್ ಬ್ರಿಡ್ಜ್ ನಿರ್ಮಾಣಕ್ಕೆ ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಇದರಿಂದ ಶಾಲಾ ಮಕ್ಕಳು ಹಾಗೂ ಸ್ಥಳೀಯರಿಗೆ ಉಪಯೋಗವಾಗಲಿದೆ ಎಂದು ಸಂಸದ ಗೋವಿಂದ ಎಂ ಕಾರಜೋಳ ತಿಳಿಸಿದರು.

ಹಿರಿಯೂರು–ಹುಳಿಯಾರು ಹೆದ್ದಾರಿಯ 31.3 ಕಿ.ಮೀ. ರಸ್ತೆ ನಿರ್ಮಾಣ ಕಾಮಗಾರಿಯಲ್ಲಿ 26 ಕಿ.ಮೀ ಹಾಗೂ ಹೊಸದುರ್ಗ–ಹೊಳಲ್ಕೆರೆ ಹೆದ್ದಾರಿಯ 31.72 ಕಿ.ಮೀ. ರಸ್ತೆ ಕಾಮಗಾರಿಯಲ್ಲಿ 26 ಕಿ.ಮೀ ರಸ್ತೆ ನಿರ್ಮಿಸಲಾಗಿದೆ. ಎರೆಡು ಕಾಮಗಾರಿಗಳ ಪೈಕಿ ಬಾಕಿ ಇರುವ 5 ಕಿ.ಮೀ ರಸ್ತೆಗಳನ್ನು ಎರೆಡು ತಿಂಗಳಲ್ಲಿ ಪೂರ್ಣಗೊಳಿಸುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ಕಡೂರು–ಹೊಸದುರ್ಗ ಹೊಸ ಹೆದ್ದಾರಿ ಕಾಮಗಾರಿ ಟೆಂಡರ್ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. 184 ಕೋಟಿ ವೆಚ್ಚದಲ್ಲಿ 48 ಕಿ.ಮೀ. ಹೆದ್ದಾರಿ ನಿರ್ಮಾಣಕ್ಕೆ ಶೀಘ್ರದಲ್ಲಿ ಪೂಜೆ ಮಾಡಿ ಕೆಲಸ ಪ್ರಾರಂಭಿಸಲಾಗುವುದು. ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 353 ಕಿ.ಮೀ ಉದ್ದ ರಾಷ್ಟ್ರೀಯ ಹೆದ್ದಾರಿ ಹಾದು ಹೋಗಿದೆ. ಇದರಲ್ಲಿ 218 ಕಿ.ಮೀ ರಸ್ತೆ ಭಾರತ ಸರ್ಕಾರದ ಎನ್.ಹೆಚ್.ಐ ನಿರ್ವಹಣೆ ಮಾಡುತ್ತಿದೆ. ಉಳಿದ ರಸ್ತೆಯನ್ನು ರಾಜ್ಯದ ರಾಷ್ಟ್ರೀಯ ಹೆದ್ದಾರಿ ವಿಭಾಗದಿಂದ ನಿರ್ವಹಣೆ ಮಾಡಲಾಗುತ್ತಿದೆ. ಜಿಲ್ಲೆಯಲ್ಲಿ ನಡೆಯುತ್ತಿರುವ ಹೈವೆ ಕಾಮಗಾರಿಗಳನ್ನು 8 ರಿಂದ 10 ತಿಂಗಳಲ್ಲಿ ಪೂರ್ಣಗೊಳಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದಾರೆ ಎಂದು ಹೇಳಿದರು.

**ಪೊಲೀಸ್ ಬಂದೋಬಸ್ತ್‌ನೊಂದಿಗೆ ಕಾಮಗಾರಿ:** ಚಳ್ಳಕೆರೆ ಹಾಗೂ ಹಿರಿಯೂರು ಮಧ್ಯದ ಹೆದ್ದಾರಿ ಕಾಮಗಾರಿ ಭೂ ಸ್ವಾಧೀನ ಸಮಸ್ಯೆ ಹಾಗೂ ಸ್ಥಳೀಯರ ಸಮಸ್ಯೆಯಿಂದ ವಿಳಂಭ ಆಗಿದೆ. ಸದ್ಯ ಹಿರಿಯೂರು ಸಮೀಪದ 9 ಕಿ.ಮೀ ರಸ್ತೆ ನಿರ್ಮಾಣ ಬಾಕಿದೆ. ವಿನಾ ಕಾರಣ ಯಾರು ಹೆದ್ದಾರಿ ಅಭಿವೃದ್ಧಿಗೆ ಅಡ್ಡಿಗಾಲು ಹಾಕಬಾರದು. ಸೂಕ್ತ ಪೊಲೀಸ್ ಬಂದೋಬಸ್ತ್‌ನಲ್ಲಿ ಈ ಹೆದ್ದಾರಿ ಕಾಮಗಾರಿಯನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದೇನೆ ಎಂದು ಸಂಸದ ಗೋವಿಂದ ಎಂ ಕಾರಜೋಳ ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಉಪವಿಭಾಗಧಿಕಾರಿ ಎಂ.ಕಾರ್ತಿಕ್, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಶಿವಕುಮಾರ್, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ಮಲ್ಲಿಕಾರ್ಜುನ್ ಸೇರಿದಂತೆ ರಾಷ್ಟ್ರೀಯ ಹೆದ್ದಾರಿ ವಿಭಾಗ ಹಾಗೂ ಪ್ರಾಧಿಕಾರದ ಅಧಿಕಾರಿಗಳು ಇದ್ದರು. ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿಗಳ ಸಮಸ್ಯಾತ್ಮಕ ವಿಷಯಗಳ ಬಗ್ಗೆ ಚರ್ಚೆ ನಡೆಸಲಾಯಿತು.

# ಸಚಿವರಿಂದ ಚಿಗಟೇರಿ ಜಿಲ್ಲಾ ಆಸ್ಪತ್ರೆ ಪರಿಶೀಲನೆ

» ದಾವಣಗೆರೆ

ಚಿಗಟೇರಿ ಜಿಲ್ಲಾ ಆಸ್ಪತ್ರೆ 400 ಬೆಡ್ ಸಾಮರ್ಥ್ಯದ ಸಿಬ್ಬಂದಿ ಇದ್ದರೂ 930 ಬೆಡ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು ಇಲ್ಲಿನ ಕಟ್ಟಡ ಹಳೆಯದಾಗುತ್ತಿದೆ. ಹಳೆ ಕಟ್ಟಡದ ಮಾದರಿಯಲ್ಲಿಯೇ ಶಿಥಿಲವಾದ ಕಟ್ಟಡ ತೆರವು ಮಾಡಿ ಹಂತ ಹಂತವಾಗಿ ಹೊಸ ಕಟ್ಟಡ ನಿರ್ಮಾಣ ಮಾಡಲು ಪ್ರಸ್ತುತ ದಕ್ಷಿಣ ಬ್ಲಾಕ್ ತೆರವು ಮಾಡಿ ಹೊಸ ಕಟ್ಟಡ ನಿರ್ಮಾಣಕ್ಕೆ ರೂ. 20 ಕೋಟಿ ಬಿಡುಗಡೆ ಮಾಡಲಾಗುತ್ತದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ತಿಳಿಸಿದರು.

ಅವರು ಗುರುವಾರ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್, ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ಹಾಗೂ ಶಾಸಕರೊಂದಿಗೆ ಚಿಗಟೇರಿ ಆಸ್ಪತ್ರೆಗೆ ಭೇಟಿ ನೀಡಿ ಶಿಥಿಲಗೊಂಡಿರುವ ಕಟ್ಟಡ, ತುರ್ತು ಚಿಕಿತ್ಸಾ ಘಟಕ, ತೀವ್ರ ನಿಗಾ ಘಟಕ, ತುರ್ತು ಚಿಕಿತ್ಸಾ ವಿಭಾಗ, ಡಯಾಲಿಸೀಸ್ ಕೇಂದ್ರ, ಶಸ್ತ್ರ ಚಿಕಿತ್ಸಾ ಕೊಠಡಿ, ವಾರ್ಡ್‌ಗಳನ್ನು ಪರಿಶೀಲನೆ ನಡೆಸಿ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಮಾತನಾಡಿದರು.

ಈಗಿರುವ ಆಸ್ಪತ್ರೆಯ ಕಟ್ಟಡ ಹಳೆಯದಾಗಿದ್ದು ಅಲ್ಲಲ್ಲಿ ಶಿಥಿಲವಾಗುತ್ತಿದೆ, ಕಟ್ಟಡವನ್ನು ಬಹಳ ವೈಜ್ಞಾನಿಕವಾಗಿ ನಿರ್ಮಾಣ ಮಾಡಿದ್ದು ಎಲ್ಲಾ ಕಟ್ಟಡ ತೆರವು ಮಾಡಿ ಹೊಸ ಕಟ್ಟಡ ನಿರ್ಮಾಣ ಮಾಡಲು ಅಂದಾಜು 100 ಕೋಟಿಗಿಂತಲೂ ಹೆಚ್ಚು ಅನುದಾನ ಬೇಕಾಗುತ್ತದೆ. ಆದ್ದರಿಂದ ಅಗತ್ಯವಿರುವ ಬ್ಲಾಕ್‌ಗಳನ್ನು ಹಂತ ಹಂತವಾಗಿ ತೆರವು ಮಾಡುವ ಮೂಲಕ ಇದೇ ಮಾದರಿಯಲ್ಲಿ ನೂತನ ಕಟ್ಟಡ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ. ಮೊದಲ ಹಂತವಾಗಿ ದಕ್ಷಿಣ ಭಾಗದಲ್ಲಿನ ಬ್ಲಾಕ್ ತೆರವು ಮಾಡಿ ಇದೇ ಜಾಗದಲ್ಲಿ ಹೊಸ ಕಟ್ಟಡ ನಿರ್ಮಾಣ ಮಾಡಲು ರೂ.20 ಕೋಟಿ ಅನುದಾನ ನೀಡಲಾಗುತ್ತದೆ. ಇದರಲ್ಲಿ ಮಾದರಿ ಶಸ್ತ್ರ ಚಿಕಿತ್ಸಾ ಕೊಠಡಿಗಳು ಸೇರಲಿವೆ ಎಂದರು.




ಇಲ್ಲಿನ ಆಸ್ಪತ್ರೆಗೆ ಇತರೆ ಜಿಲ್ಲೆಗಳಿಂದಲೂ ರೆಫರಲ್ ಆಗಿ ಹೆರಿಗೆಗಾಗಿ ಬರುತ್ತಿದ್ದು ತಿಂಗಳಿಗೆ 600 ರಿಂದ 700 ರಷ್ಟು ಹೆರಿಗೆಯಾಗುತ್ತಿದೆ. ಮತ್ತು ನವಜಾತ ಶಿಶುಗಳು ಹಾಗೂ ಮಕ್ಕಳ ಚಿಕಿತ್ಸೆಗಾಗಿ ಹೆಚ್ಚು ಜನರು ಆಗಮಿಸುತ್ತಿರುವುದರಿಂದ ಈಗಿರುವ ಸ್ಥಳಾವಕಾಶ ಸಾಕಾಗುವುದಿಲ್ಲ. ಈಗಾಗಲೇ ತಾಯಿ ಮತ್ತು ಮಕ್ಕಳ ಆಸ್ಪತ್ರೆ ನಿರ್ಮಾಣವಾಗಿದ್ದು ಒಂದು ವಾರದಲ್ಲಿ ಅಲ್ಲಿಗೆ ಸ್ಥಳಾಂತರಿಸಲು ತಿಳಿಸಿ ವಾರದಲ್ಲಿ ಟ್ರಾಮಾ ಕೇರ್ ಸೆಂಟರ್ ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಉದ್ಘಾಟನೆ ಮಾಡಲಾಗುತ್ತದೆ ಎಂದರು.

ಇಲ್ಲಿಗೆ ಎಂಆರ್‌ಐ ಸ್ಕ್ಯಾನ್ ಬೇಕೆಂದು ಬೇಡಿಕೆ ಇದ್ದು ಇನ್ನೆರಡು ತಿಂಗಳಲ್ಲಿ ನೀಡಲಾಗುತ್ತದೆ. ಶವಾಗಾರ ಸೇರಿದಂತೆ ಒಳಚರಂಡಿ, ಓವರ್‌ಹೆಡ್ ಟ್ಯಾಂಕ್, ಸೇರಿದಂತೆ ಮಕ್ಕಳ ನಿಗಾ ಘಟಕಕ್ಕೆ ವೆಂಟಿಲೇಟರ್, ಆರ್ಥೋ ವಿಭಾಗಕ್ಕೆ ಮಾದರಿ ಓಟಿ ಬೇಕೆಂದು ಸರ್ಜನ್ ಮನವಿ ಮಾಡಿದರು. ಆಸ್ಪತ್ರೆಯ ಬಳಕೆ ಅನುದಾನ ಮತ್ತು ಎಬಿಆರ್‌ಕೆ ಯಡಿ ಬರುವ ಅನುದಾನವನ್ನು ಆರೋಗ್ಯ ರಕ್ಷಾ ಸಮಿತಿಯಲ್ಲಿ ಅನುಮೋದನೆ ಪಡೆದು ಜಿಲ್ಲಾಧಿಕಾರಿಯವರಿಂದ ಮಂಜೂರಾತಿ ಪಡೆದು ಆಸ್ಪತ್ರೆಗೆ ಅಗತ್ಯವಿರುವ ಸೌಲಭ್ಯ ಕಲ್ಪಿಸಲು ಸರ್ಜನ್ ತಿಳಿಸಿ ಯೂಸರ್ ಫಂಡ್ ಮತ್ತು ಎಬಿಆರ್‌ಕೆಯಡಿ 5 ಕೋಟಿಯಷ್ಟು ಅನುದಾನವಿದ್ದು ಇದನ್ನು ವೆಚ್ಚ ಮಾಡಿ ಜನರಿಗೆ ಆರೋಗ್ಯ ಸೌಲಭ್ಯ ಕಲ್ಪಿಸಲು ತಿಳಿಸಿದರು.

24 ಗಂಟೆ ಫಾರ್ಮಸಿ ಓಪನ್‌ಗೆ ಸೂಚನೆ; ಆಸ್ಪತ್ರೆಗೆ ಬೇಕಾದ ಔಷಧಗಳನ್ನು ಬಳಕೆ ಅನುದಾನ ಮತ್ತು ಎಬಿಆರ್‌ಕೆಯಡಿ ಖರೀದಿ ಜೊತೆಗೆ ಅರೋಗ್ಯ ಇಲಾಖೆ ಉಗ್ರಾಣದಿಂದಲೂ ಔಷಧ ಪೂರೈಕೆ ಮಾಡಲಾಗುತ್ತಿದೆ. ಆಸ್ಪತ್ರೆಯಲ್ಲಿನ ಫಾರ್ಮಸಿ ದಿನದ 24 ಗಂಟೆಯು ತೆರೆದಿರುವ ಮೂಲಕ ಹೊರಗಡೆ ಚೀಟಿ ಬರೆಯವುದನ್ನು ತಪ್ಪಿಸಬೇಕೆಂದು ಸೂಚನೆ ನೀಡಿದರು.

ಶಸ್ತ್ರ ಚಿಕಿತ್ಸೆ ಹೆಚ್ಚಿಸಿ, ಆದಾಯ ಹೆಚ್ಚಿಸಿ ಸೌಕರ್ಯ ಪಡೆಯಿರಿ; ಚಿಗಟೇರಿ ಜಿಲ್ಲಾ ಆಸ್ಪತ್ರೆಯಲ್ಲಿ ಎಲ್ಲಾ ವಿದವಾದ ತಜ್ಞ ವೈದ್ಯರ ಜೊತೆಗೆ ಮೆಡಿಕಲ್ ಕಾಲೇಜ್ ತಜ್ಞ ವೈದ್ಯರು ಲಭ್ಯವಾಗುವುದರಿಂದ ಇಲ್ಲಿ ವಿನೂತನವಾದ ಶಸ್ತ್ರ ಚಿಕಿತ್ಸೆಗಳನ್ನು ಕೈಗೊಳ್ಳುವ ಅವಕಾಶ ಇದೆ. ಆರ್ಥೋ ವಿಭಾಗದಲ್ಲಿ ಎಲ್ಲಾ ಬಗೆಯ ಶಸ್ತ್ರ ಚಿಕಿತ್ಸೆ ಮಾಡಬಹುದು ಮತ್ತು ನೇತ್ರ ಚಿಕಿತ್ಸಾ ವಿಭಾಗದಲ್ಲಿಯು ರೆಟಿನಾ ಶಸ್ತ್ರ ಚಿಕಿತ್ಸೆಯನ್ನು ಇಲ್ಲಿ ಕೈಗೊಳ್ಳುವಂತಾಗಬೇಕು. ಇದರಿಂದ ಎಬಿಆರ್‌ಕೆಯಡಿ ಹೆಚ್ಚು ಅನುದಾನ ಲಭ್ಯವಾಗುವುದರಿಂದ ಆಸ್ಪತ್ರೆಯ ಮೂಲಭೂತ ಸೌಕರ್ಯಗಳನ್ನು ಹೆಚ್ಚಿಸಿಕೊಳ್ಳಲು ಸಾಧ್ಯವಾಗಲಿದೆ ಎಂದರು.

# ಮೀನು ಕೃಷಿಕರ ದಿನಾಚರಣೆ

» ಶಿವಮೊಗ್ಗ

ರಾಷ್ಟ್ರೀಯ ಮೀನು ಕೃಷಿಕರ ದಿನಾಚರಣೆಯನ್ನು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ನವಿಲೆಯಲ್ಲಿ ಬುಧವಾರ ಆಯೋಜಿಸಿದ ಕಾರ್ಯಕ್ರಮದಲ್ಲಿ ಶಾಸಕ ಎಸ್.ಎನ್.ಚನ್ನಬಸಪ್ಪ ಅವರು ಭಾಗವಹಿಸಿ ಕಾರ್ಯಕ್ರಮದ ಉದ್ಘಾಟಿಸಿದರು.

ಈ ಕಾರ್ಯಕ್ರಮದಲ್ಲಿ 6 ವಿವಿಧ ಹಸ್ತ ಪತ್ರಿಕೆಗಳನ್ನು ಬಿಡುಗಡೆಗೊಳಿಸಿ ಕೆರೆಗೆ ಮೀನು ಮರಿ ಬಿತ್ತನೆ ಮಾಡಿದರು ಹಾಗೂ ವಿಶ್ವವಿದ್ಯಾಲಯದ ಅಲಂಕಾರಿಕ ಮೀನು ಕೃಷಿ ಘಟಕವನ್ನು ವೀಕ್ಷಿಸಿ ಮಾಹಿತಿ ಪಡೆದರು. ಕಾರ್ಯಕ್ರಮದಲ್ಲಿ ಉಡುಪಿ ಕಿನಾರಾ ಮೀನು ಉತ್ಪಾದಕರ ಸಂಸ್ಥೆಯವರು ವಿವಿಧ ಮೀನು ಉತ್ಪನ್ನಗಳನ್ನು ಪ್ರದರ್ಶಿಸಿದರು. ಮೀನು ಆಹಾರ ಮಾರಾಟಗಾರರು ವಿವಿಧ ಮೀನು ಆಹಾರಗಳ ಮಾದರಿಯನ್ನು ಪ್ರದರ್ಶಿಸಿದರು. ವಿಶ್ವವಿದ್ಯಾಲಯದ ಶಿಕ್ಷಣ ನಿರ್ದೇಶಕರಾದ ಡಾ. ಹೇಮ್ಲನಾಯಕ್ ರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ನಿರ್ದೇಶಕರು ಕರ್ನಾಟಕ ರಾಜ್ಯ ಮೀನುಗಾರಿಕೆ ಮಹಾಮಂಡಳಿ ಮೈಸೂರು ಪಿ. ರಾಮಯ್ಯ, ಶಿವಮೊಗ್ಗ ಜಿಲ್ಲೆಯ ಮೀನುಗಾರಿಕೆ ಉಪ ನಿರ್ದೇಶಕರಾದ ಜಿ.ಎಂ ಶಿವಕುಮಾರ್, ಸತೀಶ್ ಎಸ್.ಕೆ. ರಾಘವೇಂದ್ರ ಮೀನುಗಾರಿಕೆ ಉಪ ನಿರ್ದೇಶಕರು (ಕಿರಿಯ ವೇತನ ಶ್ರೇಣಿ) ತರಬೇತಿ ಕೇಂದ್ರ ಬಿಆರ್ ಪ್ರಾಜೆಕ್ಟ್, ಸಹಾಯಕ ಪ್ರಾಧ್ಯಾಪಕ ಡಾ. ಎ.ಹೆಚ್. ಶಾಂತನಗೌಡ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಶಿಷ್ಯವೇತನಕ್ಕಾಗಿ ಅರ್ಜಿ

» ದಾವಣಗೆರೆ

ಕರ್ನಾಟಕದ ಮಾಜಿ ಸೈನಿಕರ ಹಾಗೂ ಹೊರರಾಜ್ಯದ ಮಿಲಿಟರಿ ಪಿಂಚಣಿದಾರ ಮಾಜಿ ಸೈನಿಕರ ಮಕ್ಕಳಿಗೆ (ಅಧಿಕಾರಿಗಳನ್ನು ಹೊರತುಪಡಿಸಿ) ಮಾನ್ಯತೆ ಪಡೆದ ವಿದ್ಯಾಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಒಂದನೇ ತರಗತಿಯಿಂದ ಪಿ.ಯು.ಸಿ ವರೆಗೆ ಓದುವ ಮಕ್ಕಳಿಗೆ ಪುಸ್ತಕ ಅನುದಾನಕ್ಕಾಗಿ ಮತ್ತು ಪದವಿ, ಡಿಪ್ಲೋಮಾ ಜೆ.ಓ.ಸಿ ವೃತ್ತಿಪರ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಶಿಷ್ಯವೇತನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಶುಲ್ಕ ರಹಿತ ಅರ್ಜಿಗಳನ್ನು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಕಚೇರಿಯಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ಸೆಪ್ಟಂಬರ್ 30 ರೊಳಗಾಗಿ ಯಾವ ಜಿಲ್ಲೆಯಲ್ಲಿ ವ್ಯಾಸಂಗ ಮಾಡುತ್ತಿರುವರೊ ಆ ಜಿಲ್ಲೆಗೆ ಸಂಬಂಧಿಸಿದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಕಚೇರಿಯ ದೂ.ಸಂ: 08182–220925 ಗೆ ಸಂಪರ್ಕಿಸಬೇಕೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕರಾದ ಡಾ.ಸಿ.ಎ ಹಿರೇಮಠ ತಿಳಿಸಿದ್ದಾರೆ.

### ಕೊಲೆ ಆರೋಪಿಗಳಿಗೆ ಜೀವಾವಧಿ ಶಿಕ್ಷೆ-ದಂಡ



» ಹಾವೇರಿ

ಆಕ್ಕಿಆಲೂರ ಬಸ್ ನಿಲ್ದಾಣದಲ್ಲಿ ಆಟೋ ರಿಕ್ಷಾ ಪಾಳೆಯ ವಿಚಾರವಾಗಿ ದೈಹಿಕ ಹಲ್ಲೆ ನಡೆಸಿ ಕೊಲೆಮಾಡಿದ ಆರೋಪಿಗಳಾದ ಅಶೋಕ ಹನುಮಂತಪ್ಪ ಶೇಷಗಿರಿ ಹಾಗೂ ಅಭಿಲಾಷ ಅಶೋಕ ಶೇಷಗಿರಿ ಎಂಬುವವರಿಗೆ ಜೀವಾವಧಿ ಶಿಕ್ಷೆ ಹಾಗೂ ದಂಡ ವಿಧಿಸಿ ಹಾವೇರಿ ಒಂದನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಜಿ.ಎಲ್.ಲಕ್ಷ್ಮೀನಾರಾಯಣ ಅವರು ಬುಧವಾರ ತೀರ್ಪು ನೀಡಿದ್ದಾರೆ. ಮೃತ ವೆಂಕಟೇಶ ನಿಂಗಪ್ಪ ಆಡೂರ ಎಂಬಾತ ದಿನಾಂಕ 10–08–2022 ರಂದು ಸಾಯಂಕಾಲ ಸಮಯದಲ್ಲಿ ಆಕ್ಕಿಆಲೂರ ಬಸ್ ನಿಲ್ದಾಣದಲ್ಲಿ ಆಟೋ ರಿಕ್ಷಾ ಪಾಳೆಯದಲ್ಲಿ ನಿಲ್ಲಿಸಿದಾಗ, ಆರೋಪಿತರು ಮೃತ ವೆಂಕಟೇಶ ನಿಂಗಪ್ಪ ಆಡೂರ ಎಂಬಾತನನ್ನು ಅವಾಚ್ಯ ಶಬ್ದಗಳಿಂದ ಬೈದು, ಜಾತಿ ನಿಂದನೆ ಮಾಡಿದ್ದಲ್ಲದೇ ದೈಹಿಕವಾಗಿ ಹಲ್ಲೆನಡೆಸಿ ಕೊಲೆಮಾಡಿದ್ದಾಗಿ ದೂರು ದಾಖಲಾಗಿತ್ತು.ಈ ಪ್ರಕರಣದ ಕುರಿತು ತನಿಖಾಧಿಕಾರಿಗಳಾದ ಶಿಗ್ಗಾಂವ ಡಿಎಸ್‌ಪಿ ಒ.ಬಿ.ಕಲ್ಲೇಶಪ್ಪ ಹಾಗೂ ಮಂಜುನಾಥ ಎಚ್.ಜಿ. ಅವರು ತನಿಖೆಕೈಗೊಂಡು, ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು.ಆರೋಪಿತರ ಮೇಲೆ ಕಲಂ:ಬಾ.ದಂ.ಸಂ.ಕಲಂ:323, 302, 504, ಸ.ವಾ 34 ಐಪಿಸಿ ಮತ್ತು ಕಲಂ: 3(1)(ಆರ್),3(2)(5),3(2)(5ಎ) ರಡಿಯಲ್ಲಿ ಆಪಾದನೆಗಳು ಜುರುವಾತಾದ ಹಿನ್ನಲೆಯಲ್ಲಿ ಆರೋಪಿತರಿಗೆ ಜೀವಾವಧಿ ಶಿಕ್ಷೆ ಹಾಗೂ ರೂ.33 ಸಾವಿರ ದಂಡ ವಿಧಿಸಿ ನ್ಯಾಯಾಧೀಶರು ತೀರ್ಪು ನೀಡಿದ್ದಾರೆ.ಅಭಿಯೋಜನೆ ಪರವಾಗಿ ಒಂದನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಸರ್ಕಾರಿ ಅಭಿಯೋಜಕರಾದ ಶ್ರೀಮತಿ ಸರೋಜಾ ಕೂಡಲಗಿಮಠ ಅವರು ವಾದ ಮಂಡಿಸಿದ್ದಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ

■ ಹಾವೇರಿ

ಭಾರತದ ಸರ್ಕಾರದ ಸ್ಟಾಫ್ ಸೆಲೆಕ್ಷನ್ ಕಮಿಷನ್‌ನಿಂದ ಖಾಲಿ ಇರುವ 17,727 ಹುದ್ದೆಗಳ ಭರ್ತಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸಹಾಯಕ ಸೆಕ್ಷನ್ ಆಫೀಸರ್, ಲೆಕ್ಕ ಪರಿಶೋಧನಾ ಅಧಿಕಾರಿ, ಲೆಕ್ಕಪತ್ರ ಅಧಿಕಾರಿ ಇತ್ಯಾದಿ. ಆದಾಯ ತೆರಿಗೆ, ಕೇಂದ್ರ ಅಬಕಾರಿ ಮತ್ತು ಸಿಬಿಐಸಿಯಲ್ಲಿ ಇನ್‌ಸ್ಪೆಕ್ಟರ್, ಇತ್ಯಾದಿ, ಇಆ ನಲ್ಲಿ ಂಇಔ ಮತ್ತು ಅಃಖ/ಅಃಓ ನಲ್ಲಿ ಸಬ್ ಇನ್‌ಸ್ಪೆಕ್ಟರ್, ಅಂಚೆ ಇಲಾಖೆಯಲ್ಲಿ ಇನ್‌ಸ್ಪೆಕ್ಟರ್ ಇತ್ಯಾದಿ. ಹಿರಿಯ ಸೆಕೆರಟರಿಯೇಟ್ ಸಹಾಯ, ಅಪ್ಪರ್ ಡಿವಿಜನ್ ಗುಮಾಸ್ತ, ಅಂಚೆ ಇಲಾಖೆ ಸಹಾಯಕ ಇತ್ಯಾದಿ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ನೇಮಕಾತಿಗೆ ಎರಡು ಹಂತಗಳ ಕಂಪ್ಯೂಟರ್ ಆಧಾರಿತ ಪರೀಕ್ಷೆ ನಡೆಯಲಿದೆ. ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 18 ರಿಂದ 27 ವರ್ಷದೊಳಗಿರಬೇಕು. ಇತರೆ ವರ್ಗದವರಿಗೆ ಸಡಲಿಕೆ ಇದೆ. ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಆಸಕ್ತ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ದಿನಾಂಕ 24–07–2024 ರೊಳಗಾಗಿ ವೆಬ್ ಸೈಟ್ https://ssc.nic.in ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಖಖಅ ಮುಖ್ಯ ಕಚೇರಿ ನವದೆಹಲಿಯ ವೆಬ್‌ಸೈಟ್ https://ssc.nic.in ಮತ್ತು ಕರ್ನಾಟಕ–ಕೇರಳದ ಜಾಲತಾಣ www.ssckkr.kar.nic.in ಅಥವಾ ದೂರವಾಣಿ ಸಂಖ್ಯೆ 080–25502520, 08375–249291ನ್ನು ಸಂಪರ್ಕಿಸಬಹುದಾಗಿದೆ.

## ಪ್ರಮುಖ ಸುದ್ದಿ

### ರಾಜ್ಯ ಮಟ್ಟದ ವಿಶ್ವ ಜನಸಂಖ್ಯಾ ದಿನಾಚರಣಾ ಕಾರ್ಯಕ್ರಮ

# ದೇಶದ ಜನನ ಪ್ರಮಾಣಕ್ಕಿಂತಲೂ ರಾಜ್ಯದ ಪ್ರಮಾಣ ಇಳಿಕೆ

» ದಾವಣಗೆರೆ

ಸ್ವಾತಂತ್ರ್ಯ ನಂತರದಲ್ಲಿ 36 ಕೋಟಿ ಇದ್ದ ಜನಸಂಖ್ಯೆ 2024 ರ ವೇಳೆಗೆ 140 ಕೋಟಿಗೆ ತಲುಪಿದ್ದು ಜನಸಂಖ್ಯಾ ನಿಯಂತ್ರಣಕ್ಕೆ ಕುಟುಂಬ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಿದ ರಾಜ್ಯಗಳಲ್ಲಿ ಕರ್ನಾಟಕ ಮುಂದಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ತಿಳಿಸಿದರು.

ಅವರು ಗುರುವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಬಿಐಇಟಿ ಕಾಲೇಜಿನ ಎಸ್.ಎಸ್.ಮಲ್ಲಿಕಾರ್ಜುನ್ ಸಾಂಸ್ಕೃತಿಕ ಕೇಂದ್ರದ ಸಭಾಂಗಣದಲ್ಲಿ ಏರ್ಪಡಿಸಲಾದ ರಾಜ್ಯ ಮಟ್ಟದ ವಿಶ್ವ ಜನಸಂಖ್ಯಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು. ಪ್ರಪಂಚದಲ್ಲಿ ಹೆಚ್ಚು ಜನಸಂಖ್ಯೆಯನ್ನು ಹೊಂದಿದ ದೇಶ ಚೀನಾವನ್ನು ಹಿಂದಿಕ್ಕಿ ಭಾರತ ಜನಸಂಖ್ಯೆ ಬೆಳವಣಿಗೆಯಲ್ಲಿ ಮುಂದೆ ಹೋಗುತ್ತಿದೆ. ದೇಶದಲ್ಲಿ 1.95 ರಷ್ಟು ಜನನ ಪ್ರಮಾಣವಿದ್ದರೆ, ಇದು ರಾಜ್ಯದಲ್ಲಿ 1.6 ರಷ್ಟಿದೆ. ಜನನ ಮತ್ತು ಮರಣ ಪ್ರಮಾಣಗಳನ್ನು ಗಣನೆಗೆ ತೆಗೆದುಕೊಂಡಲ್ಲಿ ಜನಸಂಖ್ಯಾ ಬೆಳವಣಿಗೆ ಹೆಚ್ಚಾಗುತ್ತಿಲ್ಲ. ಸಮೀಕ್ಷೆಯ ಪ್ರಕಾರ 2050 ರ ನಂತರ ಜನಸಂಖ್ಯಾ ಬೆಳವಣಿಗೆ ದರವು ಇಳಿಮುಖವಾಗಲಿದೆ ಎಂದು ಅಂದಾಜಿಸಲಾಗಿದೆ ಎಂದರು.



ಉತ್ತರ ಭಾರತ ರಾಜ್ಯಕ್ಕಿಂತಲೂ ದಕ್ಷಿಣ ರಾಜ್ಯಗಳಲ್ಲಿ ಜನಸಂಖ್ಯಾ ಬೆಳವಣಿಗೆಯನ್ನು ತಡೆಗಟ್ಟಲು ಪರಿಣಾಮಕಾರಿಯಾದ ಕುಟುಂಬ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತಂದಿವೆ. ಅದರಲ್ಲಿ ರಾಜ್ಯ ಮುಂದಿದ್ದು ಜನಸಂಖ್ಯೆ ನಿಯಂತ್ರಣಕ್ಕಾಗಿ ತಳಮಟ್ಟದಿಂದಲೂ ಜಾಗೃತಿ ಮೂಡಿಸಲಾಗುತ್ತಿದೆ. ಹುಟ್ಟುವ ಪ್ರತಿಯೊಂದು ಮಗು ದೇಶದ ಆಸ್ತಿಯಾಗಬೇಕು. ಈ ನಿಟ್ಟಿನಲ್ಲಿ ಆರೋಗ್ಯವಂತ ಮಗು ಬೆಳೆಸಲು ಹುಟ್ಟುವ ಮಗುವಿನ ಅಂತರ ಕನಿಷ್ಠ 3 ವರ್ಷಗಳಿರಬೇಕು. ಮತ್ತು ತಾಯಿಯ ಆರೋಗ್ಯ ಚನ್ನಾಗಿಟ್ಟುಕೊಳ್ಳಲು ಸಕಾಲಕ್ಕೆ ಪೌಷ್ಠಿಕ ಆಹಾರ ಸಿಗಬೇಕು, ಬಾಲ್ಯ ವಿವಾಹಗಳನ್ನು ತಡೆಗಟ್ಟಬೇಕು, ಚಿಕ್ಕ ವಯಸ್ಸಿಗೆ ಮಕ್ಕಳಾಗದಂತೆ ತಡೆಗಟ್ಟಲು ಗರ್ಭನಿರೋಧಕತೆ ಪ್ರಮುಖ ಪಾತ್ರ ವಹಿಸುತ್ತದೆ.

ಹೆಣ್ಣು ಭ್ರೂಣಹತ್ಯೆಯಿಂದ ಲಿಂಗಾನುಪಾತ ಕುಸಿತವಾಗಲಿದೆ, ಹೆಣ್ಣು ಹುಟ್ಟಿದರೆ ಮದುವೆ ಮಾಡಬೇಕೆಂದು ಯೋಚನೆ ಮಾಡುತ್ತಾರೆ. ಆದರೆ ಹೆಣ್ಣು ಗಂಡಿಗಿಂತ ಯಾವುದೇ ಕ್ಷೇತ್ರದಲ್ಲಿ ಕಡಿಮೆ ಇಲ್ಲ ಎಂಬ ಚಿಂತನೆ ಇರಬೇಕು. ಹೆಣ್ಣು ಹುಟ್ಟಿದರೆ ಅವಳನ್ನು ಭೇಗ ಮದುವೆ ಮಾಡಬೇಕೆಂದು ಯೋಚನೆ ಮಾಡುವುದು ತಪ್ಪು, ಹೆಣ್ಣಿಗೆ ಶಕ್ತಿ ತುಂಬಲು ಸಮಾನ ಅವಕಾಶಗಳನ್ನು ಕಲ್ಪಿಸಲಾಗಿದ್ದು ಆಸ್ತಿ ಹಕ್ಕುಗಳಿವೆ, ಅನೇಕರು ಹೆಣ್ಣು ಭಾರ ಎಂದು ಭ್ರೂಣಹತ್ಯೆಗೆ ಮುಂದಾಗುವರು, ಇದು ಅಪರಾಧವಾಗಿದ್ದು ನಿಷಿದ್ದವಾಗಿದೆ. ಇಂತಹ ಮನೋಭಾವ ದೂರ ಮಾಡಲು ಪತಿ, ಪತ್ನಿಗೆ ಕೌನ್ಸಿಲಿಂಗ್ ಮಾಡುವ ಮೂಲಕ ಲೋಪ ಸರಿಪಡಿಸಲು ನಿರಂತರ ಪ್ರಯತ್ನ ಮಾಡಬೇಕಾಗಿದೆ ಎಂದರು.

ದೇಶದ ಜನರಿಗೆ ಆರೋಗ್ಯ ಮತ್ತು ಶಿಕ್ಷಣ ನೀಡುವ ಮೂಲಕ ಪ್ರತಿಯೊಬ್ಬ ವ್ಯಕ್ತಿಯನ್ನು ದೇಶದ ಸಂಪತ್ತನ್ನಾಗಿ ಮಾಡುವ ಮೂಲಕ ಭಾರವಾಗದೆ ಆಸ್ತಿಯನ್ನಾಗಿಸಬೇಕು. ಆಗ ಮಾತ್ರ ಭಾರತ ವಿಶ್ವ ಗುರುವಾಗಲಿದೆ ಎಂದರು.

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ದೇಶದಲ್ಲಿ ಪ್ರತಿ ಚದುರ ಕಿಲೋಮೀಟರ್‌ಗೆ 1300 ರಷ್ಟು ಜನಸಾಂಧ್ರತೆ ಇದ್ದು ಇದು ಕೆನಾಡದಲ್ಲಿ 4.26 ರಷ್ಟಿದೆ. ಜನಸಂಖ್ಯೆ ಹೆಚ್ಚಾದಂತಲ್ಲಾ ಜನರಿಗೆ ಬೇಕಾದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕಾಗುತ್ತದೆ, ಇದಕ್ಕಾಗಿ ಪ್ರಾಕೃತಿಕ ಸಂಪತ್ತನ್ನು ಬಳಕೆ ಮಾಡಿಕೊಳ್ಳುವ ಒತ್ತಡ ಹೆಚ್ಚಲಿದೆ. ಈ ನಿಟ್ಟಿನಲ್ಲಿ ಜನಸಂಖ್ಯಾ ಸ್ಫೋಟವನ್ನು ನಿಯಂತ್ರಿಸಬೇಕಾಗಿದೆ ಎಂದರು.

ದಾವಣಗೆರೆ ನಗರದಲ್ಲಿ ಸರ್ಕಾರಿ, ಖಾಸಗಿ ಆಸ್ಪತ್ರೆ ಸೇರಿ ಸುಮಾರು 4000 ರಷ್ಟು ಬೆಡ್‌ಗಳಿವೆ. ಇಲ್ಲಿನ ಜನಸಂಖ್ಯೆ ಸುಮಾರು 5 ಲಕ್ಷ ಇದ್ದು ಮಾನದಂಡದನ್ವಯ ಪ್ರತಿ ಸಾವಿರ ಜನರಿಗೆ ಒಂದು ಬೆಡ್ ಇರಬೇಕೆಂಬ ನಿಯಮವಿದ್ದು ಅದಕ್ಕಿಂತಲೂ ಹೆಚ್ಚಿನ ಆರೋಗ್ಯ ಸೌಲಭ್ಯಗಳು ಇಲ್ಲಿವೆ. ಹಳೆ ಆಸ್ಪತ್ರೆ ಹಾಗೂ ಚಿಗಟೇರಿ ಆಸ್ಪತ್ರೆಗೆ ಕೆಲವು ಅಗತ್ಯ ಕಾಯಕಲ್ಪ ಕಲ್ಪಿಸಬೇಕಾಗಿದ್ದು ಇದಕ್ಕಾಗಿ ತಕ್ಷಣದ ಕ್ರಮವಾಗಿ ರೂ.50 ಕೋಟಿಗಳ ಅಗತ್ಯವಿರುತ್ತದೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T